ಸಂಪುಟ 01 | ಸಂಚಿಕೆ 140 | ಗುರುವಾರ 09 ಏಪ್ರಿಲ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರಾಷ್ಟ್ರೀಯ ASMR ದಿನ

ನಿರ್ದಿಷ್ಟ ಶಬ್ದಗಳು ಅಥವಾ ದೃಶ್ಯಗಳಿಂದ ಉಂಟಾಗುವ ವಿಶ್ರಾಂತಿ, ಜುಮ್ಮೆನಿಸುವಿಕೆ ಸಂವೇದನೆಗಳಿಂದ ನಿರೂಪಿಸಲ್ಪಟ್ಟ ಒಂದು ವಿದ್ಯಮಾನವಾದ ಅಟಾನಮಸ್ ಸೆನ್ಸರಿ ಮೆ-ರಿಡಿಯನ್ ರೆಸ್ಪಾನ್ಸ್ (ಂಖಒಖ) ಅನ್ನು ಆಚರಿಸಲು ಮತ್ತು ಜಾಗೃತಿ ಮೂಡಿಸಲು ಅಂತರರಾಷ್ಟ್ರೀಯ ಂಖಒಖ ದಿನವನ್ನು ವಾರ್ಷಿಕವಾಗಿ ಏಪ್ರಿಲ್ 9 ರಂದು ಆಚರಿಸಲಾಗುತ್ತದೆ. ಆನ್‌ಲೈನ್ ಸಮುದಾಯವನ್ನು ಒಂದುಗೂಡಿಸಲು ಸ್ಥಾಪಿಸಲಾದ ಇದು ಪಿಸುಮಾತು, ಟ್ಯಾಪಿಂಗ್ ಅಥ-'ವಾ ವೈಯಕ್ತಿಕ ಗಮನ ವೀಡಿಯೊಗಳಂತಹ ನೆಚ್ಚಿನ ಪ್ರಚೋದಕಗಳನ್ನು ಹಂಚಿಕೊಳ್ಳಲು ಪ್ರೋತ್ಸಾಹಿಸುತ್ತದೆ.

## ಸುಭಾಷಿತ

ಇಂದು ನಾವು ಪಕ್ಷಿಗಳಂತೆ ಆಕಾಶದಲ್ಲಿ ಹಾರುವುದನ್ನು ಕಲಿತಿದ್ದೇವೆ, ನೀರಿನೊಳಗೆ ಮೀನಿನಂತೆ ಈಜುವುದನ್ನು ಕಲಿತಿದ್ದೇವೆ. ಆದರೆ, ಮನುಷ್ಯಜೀವಿಗಳಾಗಿ ಭೂಮಿಯಲ್ಲಿ ಬದುಕುವುದನ್ನು ಮಾತ್ರ ಕಲಿತಿಲ್ಲ.

ಜಾರ್ಜ್ ಬರ್ನಾರ್ಡ್ ಶಾ

## ಜೆಸ್ಕಾಂ ನಿಂದ ಏಪ್ರಿಲ್ 9ರಂದು ನಗರದ ವಿವಿಧ ಕಡೆ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ವ್ಯಾಪ್ತಿಗೆ ಬರುವ ಶಾಖೆ 2ರಲ್ಲಿ ರಸ್ತೆ ಕಾಮಗಾರಿ ನಿರ್ವಾಹಿಸುತ್ತಿರುವ ಪ್ರಯುಕ್ತ ಏಪ್ರಿಲ್-8ರ ಬೆಳಿಗ್ಗೆ 09:30 ಗಂಟೆಯಿಂದ ಸಾಯಂಕಾಲ 05:30 ಗಂಟೆವರೆಗೆ




ಗೌಸಿಯಾ ಕಾಲೋನಿ, ಮಿನರಲ್ ವಟ-ರ್ ಪ್ಲಾಂಟ್ ಅತಿರ, ಬಂದೇನವಾಜ್ ಕಾಲೋನಿ, ಎಕ್ಸಪ್ಸರ್ ರಸ್ತೆ, ಚೌದರಿ ಲೇಔಟ್, ಗಾಂಧಿ ಲೇಔಟ್, ಹೇಮಾ ಪ್ರೆಡ್, ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಿಸ್ ಬ್ಯಾಂಕ್ ನಿಂದ 15 ಲಕ್ಷ ಹಾಕ್ತಿವಿ ಎಂದು ಮೋದಿ ಹೇಳಿದ್ದರು

## ಹದಿನೈದು ಪೈಸೆಯೂ ಬರಲಿಲ್ಲ: ಧರ್ಮ, ಜಾತಿ ಹೆಸರಿನಲ್ಲಿ ಬಿಜೆಪಿ ಮತಯಾಚನೆ'

**ಬಾಗಲಕೋಟೆ: ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಮಂಗಳವಾರ ಸಿಎಂ ಸಿದ್ದರಾಮಯ್ಯ ಬಾಗಲಕೋಟೆಯಲ್ಲಿ ಅಬ್ಬರದ ಪ್ರಚಾರ ನಡೆಸಿದರು. ಈ ವೇಳೆ ಬಿಜೆಪಿ ವಿರುದ್ಧ ಹರಿ ಹಾಯ್ದರು.**

ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಪ್ರಚಾರದ ಭಾಗವಾಗಿ ಲಿಂಗಾಯತ ಪಂಚಮಸಾಲಿ ಸಮುದಾಯದ ನಾಯಕರ ಸಭೆಯನ್ನುದ್ದೇಶಿಸಿ ಮಾತನಾಡಿದ ಸಿಎಂ, ಭಾರತವು ವೈವಿಧ್ಯಮಯ ಜಾತಿ ಮತ್ತು ಧರ್ಮಗಳ ದೇಶವಾಗಿದೆ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಬರೆದ ಸಂವಿಧಾನವು ಸಮಾಜದ ಎಲ್ಲಾ ವರ್ಗಗಳಿಗೆ ಸಮಾನ ಅವಕಾಶಗಳನ್ನು ಒದಗಿಸುತ್ತದೆ ಎಂದು ಹೇಳಿದರು. ಆದರೆ ಕೋಮುವಾದದಲ್ಲಿ ತೊಡಗಿರುವ ಬಿಜೆಪಿ ಜಾತಿ ಮತ್ತು ಮತಗಳ ಆಧಾರದ ಮೇಲೆ ಮತಯಾಚನೆ ಮಾಡುತ್ತಿದೆ ಎಂದು ಆರೋಪಿಸಿದರು.

ಬಸವಣ್ಣನವರ ಬೋಧನೆಗಳು ಸಮಾನತೆ ಮತ್ತು ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುತ್ತವೆ, ಅಂತಹ ಆದರ್ಶಗಳನ್ನು ವಿರೋಧಿಸುವ ಪಕ್ಷವು ಸಾರ್ವಜನಿಕ ಬೆಂಬಲಕ್ಕೆ ಅರ್ಹವಾಗಿದೆಯೇ ಎಂದು ಪ್ರಶ್ನಿಸಿದರು. ಬಿಜೆಪಿ ನಾಯಕರು ಬಸವಣ್ಣನವರ ತತ್ವಶಾಸ್ತ್ರ ಅಥವಾ ಸಾಂವಿಧಾನಿಕ ಮೌಲ್ಯಗಳಲ್ಲಿ ನಿಜವಾಗಿಯೂ ನಂಬಿಕೆ ಇಡುವುದಿಲ್ಲ ಎಂದು ಅವರು ಆರೋಪಿಸಿದರು.



ಬಿಜೆಪಿಯ ಮಾಜಿ ಸಿಎಂಗಳಾದ ಬಿ.ಎಸ್. ಯಡಿಯೂರಪ್ಪ, ಡಿ.ವಿ. ಸದಾನಂದಗೌಡ, ಜಗದೀಶ್ ಶೆಟ್ಟರ್ ಮತ್ತು ಬಸವರಾಜ ಬೊಮ್ಮಾಯಿ ಅವರನ್ನು ಉಲ್ಲೇಖಿಸಿ ಸಿದ್ದರಾಮಯ್ಯ, ಅವರಲ್ಲಿ ಯಾರೂ ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಲು ಶ್ರಮಿಸಿಲ್ಲಅಥವಾ ಅವರ ಪರಂಪರೆಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಕೆಲಸ ಮಾಡಲಿಲ್ಲ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರವು ಸಾಮಾಜಿ-ಕ ಸುಧಾರಕರು ಮತ್ತು ಐತಿಹಾಸಿಕ ವ್ಯಕ್ತಿಗಳನ್ನು ಗೌರವಿಸಲು ಕ್ರಮಗಳನ್ನು ತೆಗೆದುಕೊಂಡಿದೆ, ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಫೋಟೋವನ್ನು ಪ್ರದರ್ಶಿಸಲು ನಿರ್ದೇಶನಗಳನ್ನು ನೀಡುವುದು ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಅವರ ಜನ್ಮ ದಿನಾಚರಣೆಯನ್ನು ಆಚರಿಸುವುದು ಸೇರಿದಂತೆ ಹಲವು ಸಾಮಾಜಿಕ ಜವಾಬ್ದಾರಿ ನಿರ್ವಹಿಸಲು ವಿಫಲವಾಗಿದೆ ಎಂದು ಅವರು ಬಿಜೆಪಿಯನ್ನು ಟೀಕಿಸಿದರು. ಪಂಚಮಸಾಲಿ ಸಮುದಾಯವು ಹಿಂದೆ ಕಾಂಗ್ರೆಸ್‌ಗೆ ನೀಡಿದ ರಾಜಕೀಯ ಬೆಂಬಲವನ್ನು ಸಿದ್ದರಾಮಯ್ಯ ಸ್ಮರಿಸಿದರು. ವೀಣಾ ಕಾಶಪ್ಪನವರ್ ಮತ್ತು ಸಂಯುಕ್ತಾ ಪಾಟೀಲ್ ಅವರಂತಹ ಸಮುದಾಯದ ಮಹಿಳಾ ಮುಖಂಡರು ಪಕ್ಷದ ಬೆಂಬಲದೊಂದಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದಾರೆ ಎಂದು ಅವರು ಹೇಳಿದರು.

ಪಕ್ಷದ ಅಭ್ಯರ್ಥಿಯ ಬಗ್ಗೆ ಮಾತನಾಡಿದ ಸಿದ್ದರಾಮಯ್ಯ, ಉಮೇಶ್ ಮೇಟಿ ಜನರೊಂದಿಗೆ ಬಲವಾದ ಸಂಪರ್ಕ ಹೊಂದಿರುವ ಕುಟುಂಬದಿಂದ ಬಂದವರು ಎಂದು ಹೇಳಿದರು. ದಿವಂಗತ ಶಾಸಕ ಎಚ್.ವೈ. ಮೇಟಿ ಅವರು ಎಲ್ಲರನ್ನೂ ಒಳಗೊಳ್ಳುವ ಮನೋಭಾವ ಮತ್ತು ಸದ್ಭಾವನೆಗೆ ಹೆಸರುವಾಸಿಯಾಗಿದ್ದರು ಮತ್ತು ಅವರ ಕೊಡುಗೆಗಳನ್ನು ಗುರುತಿಸಿ ಪಕ್ಷವು ಅವರ ಕುಟುಂಬಕ್ಕೆ ಟಿಕೆಟ್ ನೀಡಿದೆ ಎಂದು ಹೇಳಿದರು. ಸ್ವಿಸ್ ಬ್ಯಾಂಕ್ ನಿಂದ ?15 ಲಕ್ಷ ಹಾಕ್ತಿವಿ ಎಂದು ಮೋದಿ ಹೇಳಿದ್ದರು. ಹದಿನೈದು ಪೈಸೆಯೂ ಬರಲಿಲ್ಲ. ಪ್ರತಿವರ್ಷ ಎರಡು ಕೋಟಿ ಉದ್ಯೋಗ ಅಂದರು, ಪ್ರಧಾನಿ ಆಗಿ 12 ವರ್ಷ ಆಯಿತು, 24 ಕೋಟಿ ಉದ್ಯೋಗ ಕೊಡಬೇಕಿತ್ತು ಕೊಟ್ಟರಾ? ರೈತರ ಆದ-ಾಯ ದುಪ್ಪಟ್ಟು ಮಾಡ್ತಿನಿ ಅಂದ್ರು ಮಾಡಿದ್ರಾ! ಮೋದಿ ಅಧಿಕಾರಕ್ಕೆ ಬಂದಾಗ ಡಾಲರ್ ಬೆಲೆ ?58 ಇತ್ತು. ಈಗ ?95 ರೂಪಾಯಿ ಆಗಿದೆ ಎಂದು ಕಾಲೆಳೆದರು.

# ವೆಬ್‌ಸೈಟ್ ಲೋಕಾರ್ಪಣೆ ಮಾಡಿದ ಆಲೂರು ಹಿರೇಮಠದ ಶ್ರೀಗಳು

ನೈಜ್ಯ ದೆಸೆ ನ್ಯೂಸ್

**ಯಡ್ರಾಮಿ: ತಾಲೂಕಿನ ಆಲೂರು ಗ್ರಾಮದಲ್ಲಿ: " ಆಧ್ಯಾತ್ಮಿಕ ಕಾರ್ಯಕ್ರಮ ನಡೆಯಿತು ಈ ಕಾರ್ಯಕ್ರಮದಲ್ಲಿ ಮಾನವ ಸತ್ತ ನಂತರವೂ ಮತ್ತೊಬ್ಬರ ಬದುಕಿಗೆ ಬೆಳಕಾಗುವ ದೇಹಾಂಗದಾನವು ಅತ್ಯಂತ ಪವಿತ್ರವಾದ ಕಾಯಕವಾಗಿದೆ.**

ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುತ್ತಿರುವ ರಾಷ್ಟ್ರೀಯ ದೇಹಾಂಗದಾನ ಜಾಗೃತಿ ಸಮಿತಿಯ ಕಾರ್ಯ ಶ್ಲಾಘನೀಯ," ಎಂದು ಆಲೂರು ಸಂಸ್ಥಾನ ಹಿರೇಮಠದ ಶ್ರೀ ಕೆಂಚ ವೃಷಬೇಂದ್ರ ಶಿವಾಚಾರ್ಯ ಮಹಾ



ಸ್ವಾಮೀಜಿಯವರು ಅಭಿಪ್ರಾಯಪಟ್ಟರು. ಆಲೂರ ಸಂಸ್ಥಾನ ಹಿರೇಮಠದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರೀಯ ದೇಹಾಂಗದಾನ ಜಾಗೃತಿ ಸಮಿತಿಯ ಅಧಿಕೃತ ವೆಬ್‌ಸೈಟ್ ಲಿಂಕ್ ಅನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಆಧುನಿಕ ತಂತ್ರಜ್ಞಾನದ ಮೂಲಕ ಜಾಗೃತಿ ಮೂಡಿಸಲು ಮುಂದಾಗಿರುವುದು ಸ್ವಾಗತಾರ್ಹ ಎಂದರು.

ದೇಶಾದ್ಯಂತ ದೇಹಾಂಗದಾನದ ಮಹತ್ವವನ್ನು ಸಾರುವ ಮತ್ತು ದಾನಿಗಳ ನೋಂದಣಿಗೆ ವೇದಿಕೆ ಕಲ್ಪಿಸಿಕೊಡುವ ಉದ್ದೇಶವನ್ನು ಸಮಿತಿ ಹೊಂದಿದೆ. ರಾಷ್ಟ್ರೀಯ ದೇಹಾಂಗದಾನ ಜಾಗೃತಿ ಸಮಿತಿ ಅಧ್ಯಕ್ಷ ಶಿವಾನಂದ ಹೂಗಾರ ಮುಖ್ಯಅತಿಥಿಗಳಾಗಿ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ದೇಹಾಂಗದಾನ ಜಾಗೃತಿ ಸಮಿತಿಯ ಪದಾಧಿಕಾರಿಗಳು, ಗಣ್ಯರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

### ಮುಖ್ಯಾಂಶಗಳು


- ❖ ವೆಬ್‌ಸೈಟ್ ಲೋಕಾರ್ಪಣೆ ಸಮಿತಿಯ
- ❖ ಕಾರ್ಯಚಟುವಟಿಕೆಗಳು ಮತ್ತು ದೇಹಾಂಗದಾನದ ನೋಂದಣಿ ಪ್ರಕ್ರಿಯೆಯನ್ನು ಸುಲಭಗೊಳಿಸಲು ಈ ವೆಬ್‌ಸೈಟ್ ವಿನ್ಯಾಸಗೊಳಿಸಲಾಗಿದೆ.
- ❖ ಶ್ರೀಗಳ ಆಶೀರ್ವಚನ: ಮಾನವ ಜನ್ಮ ಸಾರ್ಥಕವಾಗಬೇಕಾದರೆ ಸಮಾಜ-ಕ್ಕೆ ಉಪಯುಕ್ತವಾಗುವ ಕೆಲಸ ಮಾಡಬೇಕು. ನೇತ್ರದಾನ, ಅಂಗಾಂಗದಾನದಂತಹ ಕಾರ್ಯಗಳಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

## ಬಾಗಲಕೋಟೆ ಉಪಚುನಾವಣೆ: ಪೊಲೀಸ್ ಸಿಬ್ಬಂದಿಗೆ ಖಡಕ್ ಸೂಚನೆ

ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ: ವಿಧಾನಸಭಾ ಮತಕ್ಷೇತ್ರದ ಉಪಚುನಾವಣೆಯ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಎಸ್.ಪಿ. ಸಿದ್ದಾರ್ಥ್ ಗೋಹೆಲ್ ಅವರು ಪೊಲೀಸ್ ಸಿಬ್ಬಂದಿಗೆ ಖಡಕ್ ಸೂಚನೆಗಳನ್ನು ನೀಡಿದರು.**

ಉಪಚುನಾವಣೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು ಎಂದು ಅವರು ಹೇಳಿದರು. ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿತರಾದ ಅಧಿಕಾ-ರಿಗಳು ಮತ್ತು ಸಿಬ್ಬಂದಿ ಚುನಾವಣಾ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚಿಸಿದರು.



ಮತದಾರರಿಗೆ ಭದ್ರ ಹಾಗೂ ಸುಗಮ ವಾತಾವರಣ ಒದಗಿಸುವುದು, ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವುದು ಮುಖ್ಯ ಕರ್ತವ್ಯ ಎಂದು ಅವರು ತಿಳಿಸಿದರು.

ಸುರಕ್ಷಿತ, ಪಾರದರ್ಶಕ ಹಾಗೂ ಶಾಂತಿಯುತ ಚುನಾವಣೆ ನಡೆಸುವ ಕುರಿತು ಅಗತ್ಯ ಮಾರ್ಗದರ್ಶನ ನೀಡಲಾಯಿತು. ಬಾಗಲಕೋಟೆ ಕ್ಷೇತ್ರದಲ್ಲಿ ಹದ್ದಿನ ಕಣ್ಣು ಇಟ್ಟು ಮೇಲ್ವಿಚಾರಣೆ ನಡೆಸಲಾಗುತ್ತಿದ್ದು, ಯಾವುದೇ ಅಕ್ರಮ ಅಥವಾ ಅಶಾಂತಿ ಸಂಭವಿಸದಂತೆ

## ಇಂದು ನಿಡಗುಂದಿಯಲ್ಲಿ ರಾಜಾಹಂಡೇ ಹನುಮಪ್ಪ ನಾಯಕ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ನಿಡಗುಂದಿ: ಪಟ್ಟಣದಲ್ಲಿ 540ನೇ ರಾಜ್ಯಮಟ್ಟದ ರಾಜಾಹಂಡೇ ಹನುಮಪ್ಪ ನಾಯಕ ಜಯಂತಿ ಇಂದು (ಏ.9) ಭಕ್ತಿಭಾವದಿಂದ ನಡೆಯಲಿದೆ. ಈ ಕಾರ್ಯಕ್ರಮವನ್ನು ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೇ ವಜೀರ್ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು ರಾಜ್ಯ ಘಟಕ, ವಿಜಯಪುರ ಜಿಲ್ಲಾ ಘಟಕ ಹಾಗೂ ನಿಡಗುಂದಿ ತಾಲೂಕು ಘಟಕಗಳ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಮುದ್ದೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ.**

ಈ ಕುರಿತು ರಾಜ್ಯ ಘಟಕದ ಅಧ್ಯಕ್ಷ ಡಾ. ಎಸ್.ಎಸ್. ಪಾಟೀಲ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಕಾರ್ಯಕ್ರಮಕ್ಕೆ ನಿಡಗುಂದಿ ರುದ್ರಮುನಿ ಶ್ರೀಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಮುತ್ತಿಗಿ




ವೀರ ರುದ್ರಮುನಿ ಶ್ರೀ, ಚಿಮ್ಮಲಗಿ ಸಿದ್ಧ ರೇಣುಕಾ ಶ್ರೀ, ಇಟಗಿ ಗುರು ಶಾಂತವೀರ ಶ್ರೀ, ಕರ ಬಂಟನಾಳ ಶಿವಕುಮಾರ್ ಶ್ರೀ, ಬ್ಯಾಲ್ಯಾಳ ಶ್ರೀಶೈಲ ಮುತ್ಯಾ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಸಚಿವ ಶಿವಾನಂದ ಪಾಟೀಲ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸಿ.ಎಸ್. ನಾಡಗೌಡ, ರಾಜುಗೌಡ ಪಾಟೀಲ್, ಸೋಮನಗೌಡ ಪಾಟೀಲ್ ಸಾಸನೂರು, ಎ.ಎಸ್. ಪಾಟೀಲ್ ನಡಹಳ್ಳಿ, ಎಸ್.ಕೆ. ಬೆಳ್ಳುಬ್ಬಿ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಸಂದರ್ಭದಲ್ಲಿ ಸಮಾಜದ ಜಿಲ್ಲಾಧ್ಯಕ್ಷ ಪ್ರೇಮ್ ಕುಮಾರ್ ಮ್ಯಾಗೇರಿ, ಬಸವರಾಜ್ ವಂದಾಲ್, ಮುದ್ದೇಬಿಹಾಳ ತಾಲೂಕು ಅಧ್ಯಕ್ಷ ಶಂಕರಗೌಡ ಶಿವಣಗಿ, ಬಸವನ ಬಾಗೇವಾಡಿ ಅಧ್ಯಕ್ಷ ಸಿದ್ದನಗೌಡ ಪಾಟೀಲ್, ದೇವರ ಹಿಪ್ಪರಗಿ ಬಿಜೆಪಿ ಮಂಡಲ ಅಧ್ಯಕ್ಷ ಅವ್ವಣ್ಣ ಗೌಡ ಗ್ವಾತಗಿ ಸೇ-ರಿದಂತೆ ಸಮಾಜದ ಅನೇಕ ಮುಖಂಡರು ಹಾಗೂ ಬಾಂಧವರು ಉಪಸ್ಥಿತರಿದ್ದರು.

# ಶ್ರೀ ಅಡವಿ ಅಮರೇಶ್ವರ 72 ನೇ ಜಾತ್ರ ಮಹೋತ್ಸವ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಅಡವಿ ಅಮರೇಶ್ವರ ಗ್ರಾಮದಲ್ಲಿನ ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದಲ್ಲಿ ಮಂಗಳವಾರ ಸಂಜೆ 72 ನೇ ಜಾತ್ರ ಮಹೋತ್ಸವ ಹಾಗೂ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ಮಂಗಲ ಕಾರ್ಯಕ್ರಮ ಮತ್ತು ಗುರುವಂದನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ನಿವೃತ್ತ ಡಿ.ಜಿ.ಪಿ. ಮಾತನಾಡಿ ರಾಯಚೂರು ಜಿಲ್ಲೆಯು ಅನೇಕ ಶರಣರನ್ನು ಸಂತರನ್ನು ಕಂಡ ಪುಣ್ಯಭೂಮಿಯಾಗಿದೆ.**

ಈ ಭಾಗದಲ್ಲಿನ ಮಠಗಳು ಜನ-ರಿಗೆ ಒಳ್ಳೆಯ ಸಂಸ್ಕಾರವನ್ನು ನೀಡಿ ಸನ್ಮಾರ್ಗದಲ್ಲಿ ನಡೆಯುವಂತೆ ಮಾಡುತ್ತಿವೆ ಈ ಭಾಗದಲ್ಲಿ ಅನೇಕ ರಾಜರು,ನವಾಬರು ಆಳಿದರು ಕೂಡ ಜನರು ಅವರನ್ನು ಇಂದು ಸಮ್ಮರಿಸುತ್ತಿಲ್ಲ ಅದ್ದರೆ ಯಾರು ಸಮಾಜಕ್ಕಾಗಿ ತಮ್ಮದೆಲ್ಲವನ್ನು ತ್ಯಾಗಮಾಡಿ ಪರಿಶ್ರಮದಿಂದ,ನಿಸ್ವಾಥ-'ರ್ವಾಗಿ, ಸನ್ಮಾರ್ಗದಲ್ಲಿ ಕರೆದುಕೊಂಡು ಹೋಗುತ್ತಾರೋ




ಅವರನ್ನು ಸಮಾಜ ಕೂಡ ಸಮರ್ಪಣ ಭಾವದಿಂದ ಸ್ಮರಿಸಿಕೊಳ್ಳುತ್ತದೆ. ಮಠಗಳೆಂದರೆ ಶಾಲೆ,ಕಾಲೇಜುಗಳಿಂದ ಭವ್ಯವಾದ ಕಟ್ಟಡಗಳಿಂದಾಗುವುದಿಲ್ಲ ಮಠದಲ್ಲಿನ ಸ್ವಾಮಿಗಳ ಚಾರಿತ್ರ ?ಯದಿಂದ .ಸಂಸ್ಕಾರದಿಂದ , ತಪ್ಪಶಕ್ತಿಯಿಂದ ,ಪೂಜಾನಿಷ್ಠೆಯಿಂದ ಮಾತ್ರ ಮಠಗಳು ಅಭಿವೃದ್ಧಿ ಹೊಂದುತ್ತವೆ. ಸಮಾಜದ ಅಭಿವೃದ್ಧಿಗೆ ಮಠಗಳ ಕೋಡುಗೆ ಅಪಾರವಾಗಿದ್ದು. ಇಂದು ಮಠಗಳು ಸಮಾಜದಲ್ಲಿನ ದಲಿತರು, ಬಡವರು,ಶ್ರೀಮಂತರು,ಮಕ್ಕಳು,ಮಹಿಳೆಯರು ಸೇ-ರಿದಂತೆ ಎಲ್ಲಾರನ್ನು ಸಮಾನವಾಗಿ ಅದಾರಿಸುತ್ತಿವೆ.

ಭಕ್ತರಿಂದ ,ಭಕ್ತರಿಗಾಗಿ ಇರುವ ಕ್ಷೇತ್ರಗಳು ಮಠಗಳಾಗಿದು. ಶ್ರೀಮಠದ ಸ್ವಾಮಿಗಳು ಭಕ್ತರಿಂದ ಕ್ರೂಡಿಕರಿಸಿದ್ದನ್ನು ಭಕ್ತರ ಉದ್ದಾರಕ್ಕಾಗಿ ವಿನಿಯೋಗಿಸುತ್ತ ಬಂದಿದ್ದಾರೆ. ಶ್ರೀಮಂತಿಕೆ ಎಂದು ಕೂಡ ಶಾಶ್ವತವಾಗಿ ಉಳಿಯುವುದಿಲ್ಲ ನಮ್ಮಲಿನ ಆಚಾರ ,ವಿಚಾರಗಳು ಮಾತ್ರ ಶಾಶ್ವತವಾಗಿ ಉಳಿದುಕೊಳ್ಳುತ್ತವೆ. ಶ್ರೀ ಅಡವಿ ಅಮರೇಶ್ವರ ಮಠ ಮುಂದಿನ ದಿನಮಾನಗಳಲ್ಲಿ ಮಹಾತ್ತರವಾದ ಪುಣ್ಯಕ್ಷೇತ್ರವಾಗಿ ಬೆಳಗಲಿ ಎಂದು ತಿಳಿಸಿದರು. ಬೂದುಗುಂಪ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ನೀಡಿದರು.ಸಂಗೀತವನ್ನು ಅಮರೇಶ ಸಾಲಿಮಠ ಗವಾಯಿಗಳು ನೀಡಿದರು. ಕಿಷ್ಕಿಂದ ವಿಶ್ವವಿದ್ಯಾಲಯ ವತಿಯಿಂದ ಗೌರವ ಡಾಕ್ಟರೇಟ್ ಪಡೆದ ಸುವರ್ಣಗಿರಿ ವಿರಕ್ತಮಠ ಒಳಬಳ್ಳಾ-ರಿಯ ಶ್ರೀ ಡಾ.ಸಿದ್ದಲಿಂಗ ಮಹಾಸ್ವಾಮಿಗಳಿಗೆ ಶ್ರೀಮಠ ಹಾಗೂ ಭಕ್ತರಿಂದ ಗುರುವಂದನೆ ಸಲ್ಲಿಸಲಾಯಿತು.

ಶ್ರೀಮಠದ ವತಿಯಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ನಿವೃತ್ತ ಡಿ.ಜಿ.ಪಿ. ರವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶ್ರೀಮಠದ ಆಬಿವೃದ್ದಿಗೆ 21 ಲಕ್ಷ ರೂ ದೇಣಿಗೆ ನೀಡಿದ ಮಹಾದಾನಿಗಳಾದ ಹಿರಿಯ ವಕೀಲರಾದ ಸಿದ್ದಲಿಂಗಪ್ಪ ದಂಪತಿಗಳನ್ನು ಶ್ರೀ ಮಠದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಸುವರ್ಣಗಿರಿ ವಿರಕ್ತಮಠ ಯದ್ದಲದಿನ್ನಿ ಶ್ರೀ ಮಹಾಲಿಂಗ ಮಹಾಸ್ವಾಮಿಗಳು, ಕರೆಗುಡ್ಡ ಮಹಾಂತೇಶ್ವರ ಮಠದ ಮಹಾಂತಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತಮಠ ಒಳ್ಳಬಳ್ಳಾರಿಯ ಕಿರಿಯ ಶ್ರೀಗಳಾದ ಬಸವಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದ ಶ್ರೀ ತೊಂಟದಾರ್ಯ ಮಹಾಸ್ವಾಮಿಗಳು, ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ಮಾಜಿ ಕೃಷಿ ಬೆಲೆ ಅಯೋಗದ ಮಾಜಿ ಅಧ್ಯಕ್ಷರಾದ ಹನುಮನಗೌಡ ಬೆಳಗುರ್ಕಿ, ಮಾಜಿ ಜಿ.ಪಂ. ಅಧ್ಯಕ್ಷರಾದ ದೊಡ್ಡಬಸಪ್ಪಗೌಡ ಭೋಗವತಿ. ಸೇರಿದಂತೆ ಶ್ರೀಮಠದ ಭಕ್ತರು ಭಾಗವಹಿಸಿದರು.

## ಸಾಹಿತ್ಯ ಸಿಂಚನ

ನಗು

ನಗು ಎನ್ನುವುದು ಮನದ ಹೂವು,
ನೋವುಗಳನ್ನೂ ಮರೆಸುವ ಔಷಧವು.
ಒಂದು ನಗುವಿನಿಂದ ಸ್ನೇಹ ಬೆಳೆಯುತ್ತದೆ,
ಒಂದು ನಗುವಿನಿಂದ ಹೃದಯ ಗೆಲ್ಲುತ್ತದೆ.

ಮುಗುಳ್ನಗೆಯಲಿ ಮಂತ್ರವಿದೆ,
ಮನದ ಕತ್ತಲಿಗೆ ಬೆಳಕಿದೆ.
ನಗುವ ಮುಖವೇ ನಿಜವಾದ ಸೌಂದರ್ಯ,
ಅದರೊಳಗಿದೆ ಜೀವನದ ಮಾಧುರ್ಯ.

ಕಷ್ಟ ಬಂದರೂ ನಗುತ್ತಿರು,
ಬಾಳಿನ ದಾರಿಯಲ್ಲಿ ಸಾಗುತ್ತಿರು.
ನಗು ಹಂಚಿದಷ್ಟು ಹೆಚ್ಚಾಗುತ್ತದೆ,
ಜೀವನ ಸುಂದರವಾಗುತ್ತದೆ.

ರಮೇಶ್

# ರಾಯಚೂರಿನಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಕರ್ನಾಟಕ ರಾಜ್ಯಪಾಲರನ್ನು ಹಿಂತೆಗೆದುಕೊಳ್ಳುವಂತೆ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರಿನಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಭಾರತದ ಪ್ರಧಾನಮಂತ್ರಿ Narendra Modi ಅವರಿಗೆ ಕರ್ನಾಟಕ ರಾಜ್ಯಪಾಲರಾದ Thawar Chand Gehlot ಅವರನ್ನು ಹಿಂತೆಗೆದುಕೊಳ್ಳುವಂತೆ ಮನವಿ ಸಲ್ಲಿಸಲಾಯಿತು.**

ಈ ಮನವಿಯನ್ನು ಕರ್ನಾಟಕ ರಕ್ಷಣಾ ವೇದಿಕೆ ರಾಯಚೂರು ಜಿಲ್ಲಾ ಘಟಕದ ವತಿಯಿಂದ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ವಿನೋದ್ ರೆಡ್ಡಿ ಮಾತನಾಡಿ, ರಾಜ್ಯಪಾಲರು ರಾಜ್ಯದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿರುವುದು ಜನರಲ್ಲಿ ಅಸಮಾಧಾನ ಉಂಟುಮಾಡಿದೆ ಎಂದು ಹೇಳಿದರು. ರಾಜ್ಯ ಸರ್ಕಾರವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಿಗೆ ತೃತೀಯ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತಂದಿದ್ದು, ಅದನ್ನು ಮರುಪರಿಶೀಲಿಸುವಂತೆ ರಾಜ್ಯಪಾಲರು ಮುಖ್ಯ ಕಾರ್ಯದರ್ಶಿಗಳಿಗೆ




ಪತ್ರ ಬರೆದಿರುವುದು ಆಕ್ಷೇಪಾರ್ಹವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಕ್ರಮವು ಕರ್ನಾಟಕದಲ್ಲಿ ಹಿಂದಿ ಹೇರಲು ಪ್ರಯತ್ನವಾಗಿದೆಯೆಂಬ ಅನುಮಾನ ವ್ಯಕ್ತವಾಗಿದೆ ಎಂದರು. ರಾಜ್ಯಪಾಲರು ತಮ್ಮ ಸಂವಿಧಾನಬದ್ಧ ವ್ಯಾಪ್ತಿಯನ್ನು ಮೀರಿ ನಡೆದುಕೊಂಡಿದ್ದು, ಕನ್ನಡಿಗರ ಹಿತಾಸಕ್ತಿಗೆ ವಿರುದ್ಧವಾದ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಆದ್ದರಿಂದ ಅವರು ರಾಜ್ಯಪಾಲರ ಹುದ್ದೆಯಲ್ಲಿ ಮುಂದುವರಿಯುವ ನೈತಿಕ ಹಕ್ಕು ಕಳೆದುಕೊಂಡಿದ್ದಾರೆ ಎಂದು ಹೇಳಿದರು. ಕರ್ನಾಟಕದ ನೀತಿಗಳನ್ನು ರಾಜ್ಯದ ಜನತೆ ಆಯ್ಕೆ ಮಾಡಿದ ಸರ್ಕಾರವೇ ತೀರ್ಮಾನಿಸಬೇಕು. ಕನ್ನಡಿಗರ ಹಿತಾಸಕ್ತಿಗೆ ವಿರುದ್ಧವಾದ ಯಾವುದೇ ಕ್ರಮವನ್ನು ತೀವ್ರವಾಗಿ ವಿರೋಧಿಸಲಾಗುವುದು ಎಂದು ಎಚ್ಚರಿಸಿದರು.





ಈ ಸಂದರ್ಭದಲ್ಲಿ ಉಪಸ್ಥಿತರಿದ್ದವರು: ವಿನೋದ್ ರೆಡ್ಡಿ (ಜಿಲ್ಲಾಧ್ಯಕ್ಷರು), ನಂದಪ್ಪ ಪಿ ಮಡ್ಡಿ (ಅಧ್ಯಕ್ಷರು, ದೇವದುರ್ಗ), ಗುರುನಾಥ್ ರೆಡ್ಡಿ (ತಾಲೂಕು ಕಾರ್ಯದರ್ಶಿ), ರಂಗಪ್ಪ ಬಂಡಿ, ತಮ್ಮಣ್ಣ ಹರುಂಡಿ (ಜಾಲಹಳ್ಳಿ ಹೋಬಳಿ ಘಟಕ ಅಧ್ಯಕ್ಷರು), ಬಾಬುಸಾಬ್ (ಕೊಪ್ಪೂರು ಗ್ರಾಮ ಘಟಕ ಅಧ್ಯಕ್ಷರು), ರುದ್ರಯ್ಯ ಸ್ವಾಮಿ (ಲಿಂಗಸುಗೂರು ಘಟಕ ಅಧ್ಯಕ್ಷರು), ದುರ್ಗಾರಾಜ್ (ಮಸ್ಕಿ ತಾಲೂಕು ಅಧ್ಯಕ್ಷರು), ರಾಜೇಶ್ ಸಾಬ್ (ಸಿಂಧನೂರು ತಾಲೂಕು ಅಧ್ಯಕ್ಷರು), ಬಸನಗೌಡ (ಮಾನ್ವಿ ತಾಲೂಕು ಅಧ್ಯಕ್ಷರು), ರಂಗಣ್ಣ ಗಾಲಿ (ಅರಕೆರೆ ಘಟಕ ಅಧ್ಯಕ್ಷರು), ವೀರೇಶ್ (ರಾಯಚೂರು ತಾಲೂಕು ಅಧ್ಯಕ್ಷರು), ಹಾಗೂ ಸಾಬಣ್ಣ ಅರಕೇರಿ ಉಪಸ್ಥಿತರಿದ್ದರು.

# ಹಿರಿಯ ರೈತ ಹೋರಾಟಗಾರ ಅಮರಣ್ಣ ಗುಡಿಯಾಳ್ ನಿಧನ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು:** ತಾಲೂಕಿನ ಹಿರಿಯ ರೈತ ಹೋರಾಟಗಾರ ಅಮರಣ್ಣ ಗುಡಿಯಾಳ್ ನಿಧನರಾಗಿದ್ದಾರೆ. ಅವರು ಹಲವು ದಶಕಗಳ ಕಾಲ ರೈತ ಚಳುವಳಿ, ರೈತರ ಹಕ್ಕುಗಳಿಗಾಗಿ ಹೋರಾಟ ನಡೆಸಿದ ರೈತ ಹೋರಾಟಗಾರ , ರೈತರ ಯಾವುದೇ ಸಮಸ್ಯೆ ಇರಲಿ ಸದಾ ಮುಂಚೂಣಿಯಲ್ಲಿರುತ್ತಿದ್ದರು.




ನೀರಾವರಿ, ಸಾಲಮನ್ನಾ ಸೇರಿದಂತೆ ರೈತರ ಸಂಕಷ್ಟಕ್ಕೆ ಸಂಬಂಧಿಸಿ ಅನೇಕ ವಿಷಯಗಳಲ್ಲಿ ಹೋರಾಟಗಳನ್ನು ಮಾಡುತ್ತಾ ತಾಲೂಕ ಆಡಳಿತದ ಗಮನ ಸೆಳೆದವರರು ಗುಡಿಯಾಳ್ ಅವರ ನೇತೃತ್ವದಲ್ಲಿ ನಡೆದ ಹೋರಾಟಗಳು ರೈತ ಸಮುದಾಯಕ್ಕೆ ಹಲವು ರೀತಿಯ ನೆರವನ್ನು ಒದಗಿಸಿವೆ. ಇವರ ಸರಳ ಜೀವನ, ಉನ್ನತ ಚಿಂತನೆ ಎಂಬ ತತ್ವವನ್ನು ಪರಿಪಾಲಿಸಿದವರು ಇವರ ಅಗಲಿಕೆಯಿಂದ ತಾಲೂಕಿನ ರೈತರಿಗೆ ತುಂಬಲಾರದ ನಷ್ಟ ವಾಗಿದೆ. ಇವರ ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

# ತೆರಿಗೆ ಸಂಗ್ರಹಣೆಯಲ್ಲಿ ಶೇ.100 ರಷ್ಟು ಸಾಧನೆ

## ರಾಯಚೂರಿನ ಜಿ.ಪಂ.ಸಿಇಒ ಈಶ್ವರ ಕುಮಾರ್ ಅವರಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಪ್ರಶಂಸೆ ಪತ್ರ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಿಗಳಿಂದ 2025-26ನೇ ಸಾಲಿನಲ್ಲಿ ಶೇ.100ರಷ್ಟು ತೆರಿಗೆ ಸಂಗ್ರಹಣೆಯ ಗುರಿಯನ್ನು ಸಾಧಿಸಿರುವುದು ಅತ್ಯಂತ ಸಂತೋಷದ ಸಂಗತಿಯಾಗಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ರಾಯಚೂರಿನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್**



**ಕಾಂದೂ ಅವರಿಗೆ ಪ್ರಶಂಸಾ ಪತ್ರ ಬರೆದು ಅಭಿನಂದನೆ ತಿಳಿಸಿದ್ದಾರೆ.**

ಈ ಸಾಧನೆಗೆ ಶ್ರಮಿಸಿದ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪರಿಶ್ರಮ ಮತ್ತು ಕಾರ್ಯನಿಷ್ಠೆಯನ್ನು ಪ್ರಶಂಸಿಸುತ್ತೇನೆ. ಈ ಸಾಧನೆ ವ್ಯವಸ್ಥಿತವಾದ ಯೋಜನೆ, ಪರಿಣಾಮಕಾರಿ ಸಮನ್ವಯ ಹಾಗೂ ನಿರಂತರ ಪರಿಶ್ರಮದ ಫಲವಾಗಿದ್ದು, ಇತರೆ ಜಿಲ್ಲೆಗಳಿಗೆ ಮಾದರಿಯಾಗಿದೆ. ಈ ಮಹತ್ವದ ಸಾಧನೆಗೆ ನೇತೃತ್ವ ನೀಡಿದ ನಿಮಗೆ ಮತ್ತು ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಹಾರ್ದಿಕ ಅಭಿನಂದನೆಗಳನ್ನು ತಿಳಿಸಲು ಹರ್ಷಿಸುತ್ತೇನೆ.


ಈ ಸಾಧನೆಯನ್ನು ಸ್ಥಿರಪಡಿಸಿಕೊಳ್ಳುವುದರ ಜೊತೆಗೆ ಇನ್ನಷ್ಟು ಉತ್ತಮ ಫಲಿತಾಂಶಗಳನ್ನು ಸಾಧಿಸುತ್ತೀರೆಂದು ಆಶಿಸುತ್ತೇನೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಅವರು ಪ್ರಶಂಸಾ ಪತ್ರದಲ್ಲಿ ತಿಳಿಸಿದ್ದಾರೆ.

# ಏ.10 ರಿಂದ 20 ರವರೆಗೆ ವಿಶ್ವಗುರು ಶ್ರೀಬಸವೇಶ್ವರರ 893ನೇ ಜಯಂತೋತ್ಸವ ಹಾಗೂ ಪ್ರವಚನ

ನೈಜ್ಯ ದೆಸೆ ನ್ಯೂಸ್

**ವಿಶ್ವಗುರು, ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀಬಸವೇಶ್ವರರ 893ನೇ ಜಯಂತೋತ್ಸವದ ಕಾರ್ಯಕ್ರಮವನ್ನು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಏ.10 ರಿಂದ 20 ರವರೆಗೆ 11 ದಿನಗಳ ಕಾಲ ಪ್ರತಿದಿನ ಸಂಜೆ 7 ರಿಂದ 8:30 ರವರೆಗೆ ನಗರದ ಆರ್.ಜಿ.ಎಮ್.ಶಾಲಾ ಮೈದಾನದಲ್ಲಿ ಹಾವೇರಿ ಜಿಲ್ಲೆಯ ಅಕ್ಕಿಮಠ ಅಗಡಿಯ ಪರಮ ಪೂಜ್ಯ ಮ.ನಿ.ಪ್ರ.ಸ್ವ.ಡಾ.ಗುರುಲಿಂಗ ಮಹಾಸ್ವಾಮಿಗಳು ಪ್ರವಚನ ಮಾಡಲಿದ್ದಾರೆ ಎಂದು ಬಸವ ಕೇಂದ್ರದ ಪ್ರಧಾನ ಕಾರ್ಯದರ್ಶಿ ಪಿ.ಬಸವರಾಜ ಕುರುಕುಂದ ಹೇಳಿದರು.**

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಹನ್ನೊಂದು ದಿನಗಳ ಕಾಲ ಪ್ರತಿಯೊಂದು





ವಾರ್ಡಿನಲ್ಲಿ ಶರಣರ ದಿವ್ಯ ದರ್ಶನದ ಪ್ರವಚನದ ಅಂಗವಾಗಿ ಜನಜಾಗೃತಿ ಪಾದಯಾತ್ರೆಯನ್ನು ಬೆಳಿಗ್ಗೆ 7 ರಿಂದ 9 ರವರೆಗೆ ಹಮ್ಮಿಕೊಳ್ಳಲಾಗುತ್ತಿದೆ. ಪ್ರವಚನಕಾರರಾದ ಪರಮ ಪೂಜ್ಯ ಶ್ರೀ ಮ.ನಿ.ಪ್ರ. ಡಾ.ಗುರುಲಿಂಗ ಸ್ವಾಮಿಗಳು ಹಾಗೂ ಬಸವಕೇಂದ್ರ, ಯುವ ಬಸವಕೇಂದ್ರ, ಮಹಿಳಾ ಬಸವಕೇಂದ್ರ, ಬಸವ ಚಾರಿಟೇಬಲ್ ಟ್ರಸ್ಟ್, ಜಾಗತಿಕ ಲಿಂಗಾಯತ ಮಹಾಸಭಾ, ಬಸವ ಸಮಿತಿ, ಶರಣ ಸಾಹಿತ್ಯ ಪರಿಷತ್ತು, ರಾಷ್ಟ್ರೀಯ ಬಸವ ದಳ, ಮತ್ತು ಪ್ರಗತಿಪರ ಸಂಘಟನೆಗಳು ಭಾಗವಹಿಸುವರು.

ಮನುಷ್ಯರ ಬದುಕಿಗೆ ಪೂರಕವಾದ ಶರಣರ ವಿಚಾರಧಾರೆಗಳನ್ನು ಅರಿತುಕೊಳ್ಳಬೇಕಾಗಿದೆ. ಈಕಾರಣವಾಗಿ ತಪ್ಪದೆ ಸಾರ್ವಜನಿಕರು 11 ದಿನಗಳ ಕಾಲ ನಡೆಯುವ ಜಯಂತೋತ್ಸವ ಹಾಗೂ ಪ್ರವಚನ ಕಾರ್ಯಕ್ರಮದಲ್ಲಿ ತಾಲೂಕಿನಾದ್ಯಂತ ಸಾರ್ವಜನಿಕರು, ಮಾಧ್ಯಮ ಮಿತ್ರರು, ಭಾಗವಹಿಸಲು ಮನವಿ ಮಾಡಿದರು. ಈ ಸಂದರ್ಭದಲ್ಲಿ: ಶರಣಪ್ಪ ತೆಂಗಿನಕಾಯಿ, ಬಸವಲಿಂಗಪ್ಪ ಬಾದರ್ಲಿ, ಚಂದ್ರೇಗೌಡ ಹರಟೇನೂರು, ಇದ್ದರು.

# ಇಂದು ದ್ವಿತೀಯ ಪಿಯುಸಿ ಫಲಿತಾಂಶ- ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಣೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2026ನೇ ಸಾಲಿನ ದ್ವಿತೀಯ ಪಿಯುಸಿ (2nd PUC) ಪರೀಕ್ಷೆಯ ಫಲಿತಾಂಶವನ್ನು ದಿನಾಂಕ 09-04-2026 ರಂದು ಮಧ್ಯಾಹ್ನ 3.00 ಗಂಟೆಗೆ ಪ್ರಕಟಿಸಲಾಗುವುದಾಗಿ ತಿಳಿಸಿದೆ.**


ಕರ್ನಾಟಕ ಸರ್ಕಾರ
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

ದಿನಾಂಕ: 08-04-2026

ಮಾಧ್ಯಮ ಪ್ರಕಟಣೆಗಾಗಿ

ಪ್ರಿಯ ವಿದ್ಯಾರ್ಥಿಗಳೇ,

ದಿನಾಂಕ: 09-04-2026 ರಂದು ಮಧ್ಯಾಹ್ನ 3.00 ಗಂಟೆಗೆ 2026ರ ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ. ಸದರಿ ಫಲಿತಾಂಶವನ್ನು https://karresults.nic.in ಲಿಂಕ್ ಮೂಲಕ ಹಾಗೂ KarnatakaOne Mobile App ಮೂಲಕವೂ ಪಡೆಯಬಹುದಾಗಿದೆ. ಅಲ್ಲದೆ, ವಿದ್ಯಾರ್ಥಿಗಳ ನೊಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸಾಪ್/ಎಸ್‌ಎಂಎಸ್ (SMS) ಮೂಲಕವೂ ಫಲಿತಾಂಶದ ಮಾಹಿತಿಯನ್ನು ಮಂಡಲಿಯಿಂದ ರವಾನಿಸಲಾಗುವುದು.

ಈ ವರ್ಷ ಪ್ರಥಮ ಬಾರಿಗೆ ವಿಶೇಷವಾಗಿ, ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯನ್ನು (Marks Card) ಡಿಜಿಲಾಕರ್ (DigiLocker) ಮೂಲಕ ದಿನಾಂಕ: 09-04-2026 ರಂದು ಮಧ್ಯಾಹ್ನ 3.00 ಗಂಟೆಗೆ ಲಭ್ಯಗೊಳಿಸಲಾಗುವುದು. https://www.digilocker.gov.in ಅನ್ನು ಬಳಸಿ ಅಂಕಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಂಕಪಟ್ಟಿಯನ್ನು ಡಿಜಿಲಾಕರ್ ನಿಂದ ಡೌನ್‌ಲೋಡ್ ಮಾಡಿಕೊಳ್ಳುವ ಪ್ರಕ್ರಿಯೆಯನ್ನು ಈ Video link https://tinyurl.com/mw84wmh9 ಅನ್ನು ಬಳಸಿ ತಿಳಿದುಕೊಳ್ಳಬಹುದು.

ಫಲಿತಾಂಶ ಪಟ್ಟಿಯನ್ನು ಸಂಬಂಧಿತ ಕಾಲೇಜುಗಳಿಗೆ ದಿನಾಂಕ: 09-04-2026 ರಂದು ಮಧ್ಯಾಹ್ನ 3.00 ಗಂಟೆಗೆ ಲಭ್ಯಗೊಳಿಸಲಾಗುವುದು.

ಈ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಮಂಡಲಿಯು ಹರ್ಷಿಸುತ್ತದೆ.

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ

ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಅಧಿಕೃತ ವೆಬ್‌ಸೈಟ್ https://karresults.nic.in ಹಾಗೂ KarnatakaOne Mobile App ಮೂಲಕ ಪರಿಶೀಲಿಸಬಹುದಾಗಿದೆ.

ಇದಲ್ಲದೆ, ನೋಂದಾಯಿತ ಮೊಬೈಲ್ ಸಂಖ್ಯೆಗೆ ಖಙಖ ಮೂಲಕವೂ ಫಲಿತಾಂಶದ ಮಾಹಿತಿ ಲಭ್ಯವಾಗಲಿದೆ. ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿಯನ್ನು DigiLocker (https://www.digilocker.gov.in) ಮೂಲಕ ಡಿಜಿಟಲ್ ರೂಪದಲ್ಲಿ ಪಡೆಯಬಹುದಾಗಿದೆ. DigiLocker ನಲ್ಲಿ ಅಂಕಪಟ್ಟಿ ಪಡೆಯುವ ವಿಧಾನ ಕುರಿತು ಮಾರ್ಗದರ್ಶನಕ್ಕಾಗಿ ನೀಡಿರುವ ವಿಡಿಯೋ ಲಿಂಕ್‌ನ್ನು ಬಳಸಿಕೊಳ್ಳಬಹುದು ಎಂದು ಮಂಡಳಿ ತಿಳಿಸಿದೆ.ಈ ಮಾಹಿತಿಯನ್ನು ವಿದ್ಯಾರ್ಥಿಗಳು ಹಾಗೂ ಪೋಷಕರು ಗಮನಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡಲಾಗಿದೆ.

# ಐತಿಹಾಸಿಕ ಶಾಸನಗಳು ಹಾಗೂ ವೀರಗಲ್ಲುಗಳ ಸಂರಕ್ಷಣೆಗೆ ಮನವಿ.



ನೈಜ್ಯ ದೆಸೆ ನ್ಯೂಸ್

**ಶಿಡ್ಲಘಟ್ಟ: ತಾಲೂಕಿನ ಐತಿಹಾಸಿಕ ಶಾಸನಗಳು ಹಾಗೂ ವೀರಗಲ್ಲುಗಳ ಸಂರಕ್ಷಣೆಗೆ ಆಗ್ರಹಿಸಿ ವಿದ್ಯಾರ್ಥಿಗಳು ಮತ್ತು ತಜ್ಞರ ತಂಡವು ತಹಶೀಲ್ದಾರ್ ಗಗನಸಿಂಧು ಅವರಿಗೆ ಮನವಿ ಸಲ್ಲಿಸಲಾಯಿತು.**

ಹಂಡಿಗನಾಳ ಗ್ರಾಮ ಪಂಚಾಯ್ತಿಯಲ್ಲಿ ಕೈಗೊಂಡಿದ್ದ ಶಾಸನಗಳ ಅಧ್ಯಯನದ ವೇಳೆ ಇವುಗಳ ದುಃಸ್ಥಿತಿಯನ್ನು ಗಮನಿಸಿದ ತಂಡವು, ಇತಿಹಾಸದ ಈ ಅಮೂಲ್ಯ ಕುರುಹುಗಳು ನಿರ್ಲಕ್ಷ್ಯಕ್ಕೆ ಒಳಗಾಗುತ್ತಿರುವ ಬಗ್ಗೆ ಕಳವಳ ವ್ಯಕ್ತವಾಯಿತು. ಈ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ದಂಡಾಧಿಕಾರಿಗಳು, ಶಾಸನಗಳು ನಮ್ಮ ಸಂಸ್ಕೃತಿಯ ಜೀವಂತ ದಾಖಲೆಗಳಾಗಿದ್ದು, ಇವುಗಳ ರಕ್ಷಣೆ ಅತ್ಯಂತ ಅವಶ್ಯಕ ಎಂದು ಅಭಿಪ್ರಾಯಪಟ್ಟರು.

ಅಲ್ಲದೆ, ತಾಲೂಕಿನ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ವಿಶೇಷ ಉಪನ್ಯಾಸ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮುಂದಿನ ಪೀಳಿಗೆಗೆ ಈ ಪರಂಪರೆಯ ಮಹತ್ವವನ್ನು ತಿಳಿಸಿಕೊಡಬೇಕೆಂದು ಅವರು ಕಿವಿಮಾತು ಹೇಳಿದರು.

ಶಾಸನ ತಜ್ಞರಾದ ಕೆ. ಧನಪಾಲ್, ಅಪ್ಪೇಗೌಡನಹಳ್ಳಿ ತ್ಯಾಗರಾಜು, ಪಿಡಿಒ ಮಧು, ಕಾರ್ಯದರ್ಶಿ ಶ್ರೀನಿವಾಸ, ಗ್ರಾಮ ಲೆಕ್ಕಾಧಿಕಾರಿ ನಯನ, ಸಂಶೋಧನಾ ವಿದ್ಯಾರ್ಥಿನಿಯರಾದ ಜ್ಞಾನೇಶ್ವರಿ ಹಾಗೂ ಅಶ್ವಿನಿ ಅವರ ಮಾರ್ಗದರ್ಶನದಲ್ಲಿ ನಡೆದ ಈ ಭೇಟಿಯು, ಸ್ಥಳೀಯ ಇತಿಹಾಸದ ಉಳಿವಿಗಾಗಿ ವಿದ್ಯಾರ್ಥಿಗಳಲ್ಲಿ ಮೂಡಿರುವ ಹೊಸ ಭರವಸೆಗೆ ಸಾಕ್ಷಿಯಾಯಿತು. ಈ ಮೂಲಕ ತಾಲೂಕಿನ ಐತಿಹಾಸಿಕ ಸ್ಮಾರಕಗಳಿಗೆ ಪುನಶ್ಚೇತನ ನೀಡುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇರಿಸಲಾಗಿದೆ.

# ಜೀವಾಪಾಯಕರ ಗುಂಡಿ: ಪುರಸಭೆ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಪಟ್ಟಣದ ಬಸವೇಶ್ವರ ಸರ್ಕಲ್ ಸಮೀಪದ ಇಂದಿರಾ ಕ್ಯಾಂಟೀನ್ ಎದುರಿನ ಮುಖ್ಯ ರಸ್ತೆಯಲ್ಲಿ ಉಂಟಾಗಿರುವ ಭಾರೀ ಗುಂಡಿ ಸಾರ್ವಜನಿಕರ ಜೀವಕ್ಕೆ ತೆರೆದ ಅಪಾಯವಾಗಿ ಪರಿಣಮಿಸಿದ್ದು, ಪುರಸಭೆ ಆಡಳಿತದ ನಿರ್ಲಕ್ಷ್ಯ ಮತ್ತೊಮ್ಮೆ ಬಯಲಾಗಿದೆ. ರಸ್ತೆಯ ಮಧ್ಯಭಾಗದಲ್ಲೇ ನೀರು ಸರಬರಾಜು ವ್ಯವಸ್ಥೆಗೆ ಸಂಬಂಧಿಸಿದ ವಾಲ್ ಚೇಂಬರ್ ಕುಸಿದು ದೊಡ್ಡ ಗುಂಡಿ ಉಂಟಾಗಿದ್ದು, ಇದುವರೆಗೆ ಯಾವುದೇ ಶಾಶ್ವತ ದುರಸ್ತಿ ಕಾರ್ಯ ಕೈಗೊಳ್ಳದಿರುವುದು ಆತಂಕಕಾರಿ ಸಂಗತಿಯಾಗಿದೆ.**

ಅಪಾಯವನ್ನು ಸೂಚಿಸಲು ತಾತ್ಕಾಲಿಕವಾಗಿ ಪೊಲೀಸ್ ಇಲಾಖೆ ಬ್ಯಾರಿಕೇಡ್ ಅಳವಡಿಸಿದ್ದರೂ, ಸಮಸ್ಯೆಗೆ




ಮೂಲಭೂತ ಪರಿಹಾರ ಕಂಡುಕೊಳ್ಳದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಈ ಮಾರ್ಗವು ಪಟ್ಟಣದ ಪ್ರಮುಖ ಸಂಚಾರ ದಾರಿಯಾಗಿದ್ದು, ದಿನನಿತ್ಯ ನೂರಾರು ವಾಹನಗಳು ಸಂಚರಿಸುತ್ತವೆ. ದ್ವಿಚಕ್ರ ವಾಹನ ಸವಾರರು ಅಪಾಯದ ನಡುವೆಯೇ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಸ್ವಲ್ಪ ನಿರ್ಲಕ್ಷ್ಯವಾದರೂ ವಾಹನ ಗುಂಡಿಯೊಳಗೆ ಬಿದ್ದು ಗಂಭೀರ ಅಪಘಾತ ಸಂಭವಿಸುವ ಸಾಧ್ಯತೆ ಇದೆ.

ಸ್ಥಳೀಯ ನಿವಾಸಿ ಅಬ್ದುಲ್ ಬಾಗವಾನ್ ಮಾತನಾಡಿ, "ಇದು ನೀರು ಸರಬರಾಜಿನ ವಾಲ್ ಗುಂಡಿಯಾಗಿದ್ದು, ಕಳೆದ ಐದು-ಆರು ತಿಂಗಳಿಂದ ಇದೇ ಸ್ಥಿತಿಯಲ್ಲಿದೆ.

ದಿನನಿತ್ಯ ಇದೇ ಮಾರ್ಗದಲ್ಲಿ ಸಂಚರಿಸಬೇಕಾಗಿದ್ದು, ಯಾವ ಕ್ಷಣದಲ್ಲಾದರೂ ಅಪಘಾತ ಸಂಭವಿಸುವ ಭೀತಿ ಇದೆ. ಹಲವಾರು ಬಾರಿ ದೂರು ನೀಡಿದರೂ ಯಾರೂ ಗಮನ ಹರಿಸುತ್ತಿಲ್ಲ," ಎಂದು ಆಕ್ರೋಶ ವ್ಯಕ್ತಪಡಿಸಿದರು. ಇನ್ನೊಬ್ಬ ಸ್ಥಳೀಯರು, "ರಾತ್ರಿ ಸಮಯದಲ್ಲಿ ಗುಂಡಿ ಕಾಣಿಸದೇ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಿದೆ. ಕೇವಲ ಬ್ಯಾರಿಕೇಡ್ ಇಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ತಕ್ಷಣ ಶಾಶ್ವತ ದುರಸ್ತಿ ಅಗತ್ಯ," ಎಂದು ಒತ್ತಾಯಿಸಿದರು. ಈ ಕುರಿತು ಪುರಸಭೆಯ ಅಧಿಕಾರಿ ಮಲ್ಲನಗೌಡ ಬಿರಾದಾರ ಪ್ರತಿಕ್ರಿಯಿಸಿ, "ಇದು ನೀರು ಸರಬರಾಜು ವಾಲ್ ಚೇಂಬರ್ ಸಮಸ್ಯೆಯಾಗಿದ್ದು, ದುರಸ್ತಿ ಕಾರ್ಯಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದೆ. ಶೀಘ್ರದಲ್ಲೇ ಗುಂಡಿಯನ್ನು ಮುಚ್ಚಿ ರಸ್ತೆ ದುರಸ್ತಿ ಮಾಡಲಾಗುವುದು," ಎಂದು ತಿಳಿಸಿದ್ದಾರೆ. ಜನಪ್ರತಿನಿಧಿಗಳ ಮೇಲೂ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದು, "ಚುನಾವಣೆಯ ವೇಳೆ ಮಾತ್ರ ಜನರ ಸಮಸ್ಯೆಗಳ ಬಗ್ಗೆ ಮಾತನಾಡುವವರು, ಇಂತಹ ಜೀವಾಪಾಯಕರ ಸಮಸ್ಯೆಗಳ ಬಗ್ಗೆ ಮೌನ ವಹಿಸಿರುವುದು ವಿಷಾದನೀಯ," ಎಂದು ಟೀಕಿಸಿದ್ದಾರೆ. ತೆರಿಗೆ ಪಾವತಿಸುವ ನಾಗರಿಕರಿಗೆ ಸುರಕ್ಷಿತ ರಸ್ತೆ ಒದಗಿಸುವುದು ಆಡಳಿತದ ಮೂಲಭೂತ ಜವಾಬ್ದಾರಿಯಾಗಿದ್ದು, ಇಂತಹ ಅಪಾಯಕರ ಗುಂಡಿಯನ್ನು ತಿಂಗಳುಗಳ ಕಾಲ ಹಾಗೆಯೇ ಬಿಟ್ಟಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ. ಯಾವುದೇ ದುರ್ಘಟನೆ ಸಂಭವಿಸುವ ಮುನ್ನವೇ ಪುರಸಭೆ ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ವಾಲ್ ಚೇಂಬರ್ ದುರಸ್ತಿ ಮಾಡಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

## ನೇಮಕಾತಿ ಪ್ರಕಟಣೆ

ಡಾ.ಬಿ.ಆರ್.ಎಡಿಸಿಎಲ್ ನೇಮಕಾತಿ 2026-2 ಕಾನೂನು ಸಲಹೆಗಾರ, ಕಂಪನಿ ಕಾರ್ಯದರ್ಶಿ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಪ್ರಿಲ್ 3, 2026 ಶಶಿ ಅವ-ರಿಂದ ಡಾ.ಬಿ.ಆರ್.ಎಡಿಸಿಎಲ್ ನೇಮಕಾತಿ 2026: 2 ಕಾನೂನು ಸಲಹೆಗಾರ, ಕಂಪನಿ ಕಾರ್ಯದರ್ಶಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಲಿಮಿಟೆಡ್ ಏಪ್ರಿಲ್ 2026 ರ ಡಾ.ಬಿ.ಆರ್.ಎಡಿಸಿಎಲ್ ಅಧಿಕೃತ ಅಧಿಸೂಚನೆಯ ಮೂಲಕ ಕಾನೂನು ಸಲಹೆಗಾರ, ಕಂಪನಿ ಕಾರ್ಯದರ್ಶಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು - ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 21-ಏಪ್ರಿಲ್-2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 02-04-2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21-ಏಪ್ರಿಲ್-2026 ಅಧಿಕೃತ ವೆಬ್‌ಸೈಟ್: adcl.karnataka.gov.in

## ತುಮಕೂರು ಜಿಲ್ಲೆಯ ಶ್ರೀ ಸಿದ್ದಗಂಗಾ ಮಠ ವ್ಯಾಪ್ತಿಯ ಶ್ರೀ ಸಿದ್ದಲಿಂಗೇಶ್ವರ ಅನಾಥಾಲಯದಲ್ಲಿ 2026-27ನೇ ಸಾಲಿನ ವಿದ್ಯಾರ್ಥಿ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನೈಜ್ಯ ದೆಸೆ ನ್ಯೂಸ್

**ಶ್ರೀಸಿದ್ದಲಿಂಗೇಶ್ವರ ಅನಾಥಾಲಯ, ಶ್ರೀ ಸಿದ್ದಗಂಗಾಮಠ, ತುಮಕೂರು ಜಿಲ್ಲೆ ಇದರ 2026-27ನೇ ಸಾಲಿಗೆ ಅರ್ಜಿಗಳನ್ನು ದಿನಾಂಕ 02-05-2026 ರಿಂದ ದಿನಾಂಕ 15-05-2026ರ ವರೆಗೆ ಕೊಡಲಾಗುವುದು. ಶ್ರೀ ಸಿದ್ಧಲಿಂಗೇಶ್ವರ ಅನಾಥಾಲಯಕ್ಕೆ ಹೊಸದಾಗಿ 3ನೇ ತರಗತಿಯಿಂದ 8ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಬಯಸುವ ಗ್ರಾಮೀಣ ಮತ್ತು ನಗರ ಪ್ರದೇಶದ ಬಡ ಕುಟುಂಬದ ವಿದ್ಯಾರ್ಥಿಗಳು ಖುದ್ದಾಗಿ ಬಂದು ಶ್ರೀ ಮಠದ ಲೆಕ್ಕಪತ್ರ ವಿಭಾಗದಲ್ಲಿ ಅರ್ಜಿಯನ್ನು ಪಡೆಯುವುದು.**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವ-ರಿಗೆ ಆದ್ಯತೆಯನ್ನು ನೀಡಲಾಗುವುದು. 09ನೇ ತರಗತಿ ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ದಾಖಲಾತಿ ಇರುವುದಿಲ್ಲ ಸರಿಯಾಗಿ ಭರ್ತಿ ಮಾಡಿದ ಪ್ರವೇಶ ಅರ್ಜಿಯ ಜೊತೆಗೆ ಆಯಾ ತಾಲ್ಲೂಕಿನ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಧೃಡೀಕರಿಸಲ್ಪಟ್ಟ ವಾರ್ಷಿಕ ವರಮಾನದ ಆದಾಯ ಪತ್ರ ಮತ್ತು ಜಾತಿ ಧೃಡೀಕರಣ ಪತ್ರವನ್ನು ಸಲ್ಲಿಸುವುದು. ಪ್ರವೇಶವನ್ನು ಅಪೇಕ್ಷಿಸುವ ವಿದ್ಯಾರ್ಥಿಗಳಿಗೆ ಸಂದರ್ಶನದ ದಿನಾಂಕ 29.05.2026 ರಿಂದ ಪ್ರಾರಂಭವಾಗಿ ದಿನಾಂಕ 05-06-2026ರ ವರೆಗೆ ನಡೆಯುವುದು. ಈ ದಿನಾಂಕಗಳಲ್ಲಿ ವಿದ್ಯಾರ್ಥಿ ಮತ್ತು ಪೋಷಕರು ಖುದ್ದಾಗಿ ಬಂದು ಅಧ್ಯಕ್ಷರ ಸಂದರ್ಶನದಲ್ಲಿ ಪಾಲ್ಗೊಂಡು ನೇರವಾಗಿ ದಾಖಲಾತಿಯನ್ನು ಪಡೆಯುವುದು. ಇದಕ್ಕೆ ಪ್ರತ್ಯೇಕವಾದ ಸಂದರ್ಶನದ ಪತ್ರಗಳನ್ನು ಕಳುಹಿಸಿಕೊಡಲಾಗುವುದಿಲ್ಲ. ಪ್ರವೇಶದ ಅರ್ಜಿಗಳನ್ನು ಅನ್ಲೈನ್ (Online) ನಲ್ಲಿ ಪಡೆಯಲು ಅವಕಾಶವಿರುವುದಿಲ್ಲ.

## ಏಪ್ರಿಲ್ 12ರಂದು ಮೊರಾರ್ಜಿ ವಸತಿ ಶಾಲೆಗಳ ಪ್ರವೇಶ ಪರೀಕ್ಷೆ ಭಾಗಯ್ಯ ನಾಯಕ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: 2025-26ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ನಡೆಯುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕಾಗಿ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12, 2026ರಂದು ನಿಗದಿಪಡಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಭಾಗಯ್ಯ ನಾಯಕ ತಿಳಿಸಿದ್ದಾರೆ.**



ಆನ್‌ಲೈನ್ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ತಮ್ಮ ಪ್ರವೇಶ ಪತ್ರ (ಹಾಲ್ ಟಿಕೆಟ್) ಅನ್ನು ಡೌನ್‌ಲೋಡ್ ಮಾಡಿಕೊಂಡು, ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳಿಗೆ ಸಮಯಕ್ಕೆ ಸರಿಯಾಗಿ ಹಾಜರಾಗಬೇಕು ಎಂದು ಅವರು ಮನವಿ ಮಾಡಿದ್ದಾರೆ. ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದ್ದಾರೆ. ಇನ್ನಷ್ಟು ಮಾಹಿತಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://dom.karnataka.gov.in ಅಥವಾ ತಾಲೂಕು ಅಲ್ಪಸಂಖ್ಯಾತರ ಅರಿವು ಮೂಡಿಸುವ ಮಾಹಿತಿ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ರೈತರು ಯೂರಿಯಾ ರಸ ಗೊಬ್ಬರ ಖರೀದಿಸಲು ಎಫ್.ಐ.ಡಿ ಸಂಖ್ಯೆ ಕಡ್ಡಾಯ: ಕೃಷಿ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪ್ರಸ್ತುತ ಮುಂಗಾರು ಹಂಗಾಮಿನಿಂದ ರೈತರು ಯೂರಿಯಾ ರಸಗೊಬ್ಬರ ಖರೀದಿ ಮಾಡಲು ಕೃಷಿ ಇಲಾಖೆಯು ಅಭಿವೃದ್ಧಿಪಡಿಸಿರುವ ಹೊಸ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ರೈತರ ಎಫ್.ಐ.ಡಿ. ಸಂಖ್ಯೆ ಮತ್ತು ಆಧಾರ ಕಾರ್ಡ್ ಬಳಸಿಕೊಂಡು ರೈತರು ಹೊಂದಿರುವ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಎಷ್ಟು ಪ್ರಮಾಣದ ಯೂರಿಯಾ ಅಗತ್ಯವಿದೆಯೋ ಅಷ್ಟನ್ನು ಮಾತ್ರ ರೈತರು ಖರೀಧಿಸಲು ಹಾಗೂ ರಸಗೊಬ್ಬರ ಮಾರಾಟಗಾರರು ರೈತರಿಗೆ ವಿತ-ರಿಸಲು ಅವಕಾಶವಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌವ್ಹಾಣ ಅವರು ತಿಳಿಸಿದ್ದಾರೆ.**

ಇಲಾಖೆಯ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ಎಫ್.ಐ.ಡಿ ದಾಖಲಿಸಿ ಯೂ-ರಿಯಾ ರಸಗೊಬ್ಬರ ವಿತರಿಸಬೇಕು. ಎಫ್.ಐ.ಡಿ. ಹೊಂದಿಲ್ಲದ ರೈತರು ತಕ್ಷಣವೇ ತಮ್ಮ ಪಹಣಿ, ಬ್ಯಾಂಕ್ ಪಾಸ್‌ಬುಕ್ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಎಫ್.ಐ.ಡಿ. ಸೃಜಿಸಿಕೊಳ್ಳಬೇಕು. ಈಗಾಗಲೇ ಎಫ್.ಐ.ಡಿ. ಹೊಂದಿರುವ ರೈತರು ತಮ್ಮ ಎಲ್ಲ ಸರ್ವೇ ನಂಬರ್‌ಗಳನ್ನು ಅದಕ್ಕೆ ಜೋಡಣೆ ಮಾಡಬೇಕು. ರೈತರ ನೋಂದಣಿ ಮತ್ತು ಫಲಾನುಭವಿ ಮಾಹಿತಿ ವ್ಯವಸ್ಥೆ ಮೂಲಕ ರೈತರ ವೈಯಕ್ತಿಕ ವಿವರ, ಭೂಮಿ ವಿವರ, ಬ್ಯಾಂಕ್ ಖಾತೆ, ಆಧಾರ್ ಸಂಖ್ಯೆಯ ಮಾಹಿತಿಯನ್ನೊಳಗೊಂಡ ಎಫ್.ಐ.ಡಿ ಅನ್ವಯ ರೈತರ ಜಮೀನಿನ ವಿಸ್ತೀರ್ಣ ಹಾಗೂ ಬೆಳೆಗೆ ತಕ್ಕಂತೆ ಯೂರಿಯಾ ಪ್ರಮಾಣ ಅಗತ್ಯ ಇರುವಷ್ಟು ಮಾತ್ರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ರೈತರಲ್ಲದವರು ಆದ-ಾರ್ ಬಳಸಿ / ಬೇರೆ ರೈತರ ಎಫ್. ಐ.ಡಿ ಬಳಸಿ ರಸಗೊಬ್ಬರ ಖರೀದಿಸಿ ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿ ಮಾಡುವ ಪ್ರಕರಣ ಕೃಷಿಯೇತರ ಚಟುವಟಿಕೆಗಳಿಗೆ ರಸಗೊಬ್ಬರ ಬಳಕೆ ಮಾಡುವಂತ ಪ್ರಕರಣ, ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು, ಕಾಳಸಂತೆಯಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ರಸಗೊಬ್ಬರಗಳನ್ನು ಹೆಚ್ಚಿನ ಬೆಲೆಗೆ ಮಾರಾಟ, ಅನಧಿಕೃತ ದಾಸ್ತಾನು / ಬಳಕೆಯ/ ಇತರೆ ಕಾನೂನು ಬಾಹಿರ ಚಟುವಟಿಗಳ ಬಗ್ಗೆ, ನಿಗಾವಹಿಸಲು ಜಿಲ್ಲಾ ಸಮಿತಿ ರಚನೆಯಾಗಿದ್ದು, ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಭೂಮಿಯ ಫಲವತ್ತತೆ ಹಾಗೂ ಮಣ್ಣಿನ ಆರೋಗ್ಯದ ಹಿತದೃಷ್ಟಿಯಿಂದ ರೈತರು ಅನಗತ್ಯವಾಗಿ ಹೆಚ್ಚಿನ ರಸಗೊಬ್ಬರ ಬಳಕೆ ಮಾಡದೆ ಬೆಳೆಗೆ ಅನುಗುಣವಾಗಿ ಮಿತವಾಗಿ ರಸಗೊಬ್ಬರ ಬಳಸಬೇಕೆಂಬ ಉದ್ದೇಶದಿಂದ ಇಲಾಖೆಯು ಈ ಕ್ರಮ ಜಾರಿಗೆ ತಂದಿದೆ. ಅಲ್ಲದೆ, ರೈತರು ಇತರೆ ಸಾವಯವ ಗೊಬ್ಬರ, ಜೈವಿಕ ಗೊಬ್ಬರ ಮತ್ತು ಹಸಿರೆಲೆ ಗೊಬ್ಬರಗಳನ್ನು ಬಳಸುವಂತೆ ತಿಳಿಸಿದೆ. ಅಧಿಕೃತ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ-ಕಿಸಾನ್ ತಂತ್ರಾಂಶದಲ್ಲಿ ರೈತರ ಎಫ್.ಐ.ಡಿ. ನಮೂದಿಸಿ ಯೂರಿಯಾ ಮಾರಾಟ ಮಾಡಬೇಕು. ಒಂದು ವೇಳೆ 'ಓ' ಫಾರಂ ನವೀಕರಿಸದೆ ಮಾರಾಟ ಮಾಡಿದರೆ, ನಿಗದಿಪಡಿಸಿದ ಗರಿಷ್ಟ ಮಾರಾಟ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಿದರೆ ಅಥವಾ ಕೃಷಿಯೇತರ ಉದ್ದೇಶಗಳಿಗೆ ಸರಬರಾಜು ಮಾಡುವುದು. ಇತರ ಕಾನೂನುಬಾಹಿರ ಚುಟುವಟಿಕೆ ಕಂಡುಬಂದಲ್ಲಿ ಅಂತಹ ಮಾರಾಟಗಾರರ ವಿರುದ್ಧ ರಸಗೊಬ್ಬರ ನಿಯಂತ್ರಣ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 2025ನೇ ಸಾಲಿನ ಅಂತರ್ಜಲ ಮೌಲ್ಯಮಾಪನ ವರದಿಯನ್ನು ಬಿಡುಗಡೆಗೊಳಿಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್ ಎಸ್ ಬೋಸುರಾಜು



ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಇಂದು ವಿಕಾಸಸೌಧದ ನನ್ನ ಕಚೇರಿಯಲ್ಲಿ 2025ನೇ ಸಾಲಿನ ಅಂತರ್ಜಲ ಮೌಲ್ಯಮಾಪನ ವರದಿಯನ್ನು ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ ಸಭಾ ನಾಯಕರಾದ ಎನ್ ಎಸ್ ಬೋಸುರಾಜು ಅವರು ಬಿಡುಗಡೆಗೊಳಿಸಿದರು.**

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಮಾನ್ಯ ಉಪಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ರಾಜ್ಯ ಸರ್ಕಾರ ಜಲಸಂರಕ್ಷಣೆಗೆ ವಿಶೇಷ ಆದ್ಯತೆ ನೀಡಿದ್ದು, ಕಳೆದ ಎರಡು ವರ್ಷಗಳಲ್ಲಿ ಕೈಗೊಂಡ ಯೋಜನೆಗಳು ರಾಜ್ಯದ ಜಲ ಭದ್ರತೆಯನ್ನು ಬಲಪಡಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿ ಪರಿಣಮಿಸಿವೆ. ರಾಜ್ಯದ ವಿವಿಧ ಭಾಗಗಳಲ್ಲಿ ಕೆರೆಗಳ ಪುನರುಜ್ಜೀವನ, ಮಳೆನೀರು ಸಂಗ್ರಹಣೆ, ಚೆಕ್‌ಡ್ಯಾಂ ನಿರ್ಮಾಣ, ಹೊಳೆ-ಕಾಲುವೆಗಳ ಅಭಿವೃದ್ಧಿ ಹಾಗೂ ವೈಜ್ಞಾನಿಕ ನೀರಿನ ನಿರ್ವಹಣೆ ಕ್ರಮಗಳು ಪರಿಣಾಮಕಾರಿಯಾಗಿ ಜಾರಿಯಾಗಿರುವುದರಿಂದ ಅಂತರ್ಜಲ ಮಟ್ಟದಲ್ಲಿ ಸ್ಪಷ್ಟ ಸುಧಾರಣೆ ಕಂಡುಬಂದಿದೆ.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಮೂಲಕ "ಜಲ ಸಂರಕ್ಷಣೆ ಜನರ ಪಾಲ್ಗೊಳ್ಳಿಕೆ" ಎಂಬ ತತ್ವವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಜಲಸಂರಕ್ಷಣೆಯಲ್ಲಿ ರಾಜ್ಯದ ಸಾಧನೆ ಉತ್ತಮ ಮಳೆಯ ಜೊತೆಗೆ ಜಲಸಂರಕ್ಷಣಾ ಅಭಿಯಾನಗಳು ರಾಜ್ಯದ ಅನೇಕ ನೀರಿನ ಕೊರತೆಯ ಪ್ರದೇಶಗಳಲ್ಲಿ ಹೊಸ ಆಶಾವಾದವನ್ನು ಮೂಡಿಸಿವೆ. ಕೃಷಿ ಕ್ಷೇತ್ರದಲ್ಲಿ ಮೈಕ್ರೋ ಇರಿಗೇಶನ್, ಡ್ರಿಪ್ ಹಾಗೂ ಸ್ಪ್ರಿಂಕ್ಲರ್ ಪದ್ಧತಿಗಳ ಬಳಕೆ ಹೆಚ್ಚುತ್ತಿರುವುದು ಅಂತರ್ಜಲ ಬಳಕೆಯನ್ನು ನಿಯಂತ್ರಿಸಲು ನೆರವಾಗಿದೆ. ರೈತರಿಗೆ ನೀರು ಉಳಿತಾಯ ತಂತ್ರಜ್ಞಾನಗಳ ಕುರಿತು ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ವ್ಯಾಪಕವಾಗಿ ಹಮ್ಮಿಕೊಳ್ಳಲಾಗಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಲ ಬಜೆಟ್ ವ್ಯವಸ್ಥೆ ರೂಪಿಸುವ ಕಾರ್ಯಕ್ಕೂ ವೇಗ ನೀಡಲಾಗಿದೆ. ಪರಿಸರ ಸಮತೋಲನದತ್ತ ಮಹತ್ವದ ಹೆಜ್ಜೆ ಅಂತರ್ಜಲ ಮರುಪೂರಣ ಸಾಮಥ-್ಯದಲ್ಲಿ ಏರಿಕೆ ಕಂಡಿರುವುದು ಕೇವಲ ನೀರಿನ ಲಭ್ಯತೆ ಹೆಚ್ಚಳವಷ್ಟೇ ಅಲ್ಲದೆ, ಪರಿಸರ ಸಮತೋಲನ ಕಾಪಾಡುವಲ್ಲಿ ಸಹ ಮಹತ್ವದ ಸಾಧನೆಯಾಗಿದೆ. ಭವಿಷ್ಯದ ಪೀಳಿಗೆಗಳಿಗೆ ನೀರಿನ ಸಂಪನ್ಮೂಲಗಳನ್ನು ಸಂರಕ್ಷಿಸುವ ಉದ್ದೇಶದಿಂದ ಸರ್ಕಾರ ಸಮಗ್ರ ಜಲ ನೀತಿ ರೂಪಿಸಿ ಅನುಷ್ಠಾನಗೊಳಿಸುತ್ತಿದೆ.

ಸರ್ಕಾರದ ಬದ್ಧತೆ ರಾಜ್ಯದ ಪ್ರತಿಯೊಂದು ಗ್ರಾಮಕ್ಕೂ ಸಮರ್ಪಕ ಕುಡಿಯುವ ನೀರು, ರೈತರಿಗೆ ಸ್ಥಿರ ನೀರಾವರಿ ವ್ಯವಸ್ಥೆ ಹಾಗೂ ನಗರ ಪ್ರದೇಶಗಳಿಗೆ ದೀರ್ಘಕಾಲೀನ ಜಲ ನಿರ್ವಹಣೆಯನ್ನು ಒದಗಿಸುವುದು ನಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಜನರ ಸಹಕಾರದಿಂದ ಜಲ ಸಂರಕ್ಷಣೆಯನ್ನು ಜನಆಂದೋಲನವಾಗಿಸುವ ದಿಸೆಯಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ಹೊಸ ಯೋಜನೆಗಳನ್ನು ಜಾರಿಗೆ ತರಲಾಗುವುದು. ಸಭೆಯಲ್ಲಿ ಸಣ್ಣ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಇಲಾಖೆಯ ಹಿರಿಯ ಅಧಿಕಾರಿಗಳು, ಕೇಂದ್ರ ಮತ್ತು ರಾಜ್ಯ ಅಂತರ್ಜಲ ಸಂಸ್ಥೆಗಳ ತಜ್ಞರು ಹಾಗೂ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

# ಸೇವಾ ಮನೋಭಾವ ಬೆಳೆಸಿಕೊಳ್ಳಲು ಎನ್.ಎಸ್.ಎಸ್ ಶಿಬಿರ ಸಹಕಾರಿ: ಪಲ್ಲವಿ ನಾಡಗೌಡ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ವಿದ್ಯಾರ್ಥಿ ಜೀವನದಲ್ಲಿ ಎನ್.ಎಸ್.ಎಸ್ (ರಾಷ್ಟ್ರೀಯ ಸೇವಾ ಯೋಜನೆ) ಶಿಬಿರವು ಅಪರೂಪದ ಹಾಗೂ ಮಹತ್ವದ ಕಾರ್ಯಕ್ರಮವಾಗಿದ್ದು, ಸಮಾಜದೊಂದಿಗೆ ಬೆಸೆದುಕೊಳ್ಳಲು ಇದು ಸುವರ್ಣಾವಕಾಶ ಒದಗಿಸುತ್ತದೆ. ವಿದ್ಯಾರ್ಥಿಗಳು ಇಂತಹ ಶಿಬಿರಗಳ ಮೂಲಕ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ದೇವಿಕಾ ಸುಬ್ಬರಾವ್ ಫೌಂಡೇಷನ್ ಅಧ್ಯಕ್ಷೆ ಶ್ರೀಮತಿ ಪಲ್ಲವಿ ನಾಡಗೌಡ ಹೇಳಿದರು.**




ತಾಲ್ಲೂಕಿನ ಹಡಲಗೇರಿ ಗ್ರಾಮದ ಮಾದರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿಯುಕ್ತ ಸರಕಾರಿ ಪ್ರಥ-ಮ ದರ್ಜೆ ಕಾಲೇಜಿನ ಎನ್.ಎಸ್.ಎಸ್ ಘಟಕದಿಂದ ದತ್ತು ಗ್ರಾಮ ಮುದ್ನಾಳದಲ್ಲಿ ಆಯೋಜಿಸಿದ್ದ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎನ್.ಎಸ್.ಎಸ್ ಕಾರ್ಯಕ್ರಮವು ವ್ಯಕ್ತಿ ಮತ್ತು ಸಮಾಜವನ್ನು ಒಗ್ಗೂಡಿಸುವ ಸೇತುವೆಯಾಗಿದೆ ಎಂದು ಮುದ್ದೇಬಿಹಾಳ ಸರ್ಕಾರಿ ಪಿಯು ಕಾಲೇಜಿನ ಉಪನ್ಯಾಸಕ ಸಿ.ಎಸ್. ನಾಲತವಾಡ ಅವರು ಮುಖ್ಯ ಅತಿಥಿ ಭಾಷಣದಲ್ಲಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಎಸ್.ಎಲ್. ಪಾಟೀಲ ವಹಿಸಿದ್ದರು. ಅತಿಥಿಗಳಾಗಿ ಎಸ್.ಎಸ್. ರಾಮತಾಳ, ಶಂಕರಗೌಡ ಪಾಟೀಲ, ಎಸ್.ಎ. ಮೇರೆಖೋರ, ಅಬ್ದುಲ್ ರಜಾಕ್ ನದಾಫ್, ಎಸ್.ವಿ. ಬಸರಕೋಡ್, ಶಿವಪ್ರಕಾಶ್ ಗೂಳಿ, ನಾಗರಾಜ ದೊಡ್ಡಮನಿ, ಕೆ.ಜಿ. ಗೆದ್ದಪ್ಪನವರ, ಪ್ರೊ. ರೇವಣಸಿದ್ದಪ್ಪ ಅಮ್ಮಣ್ಣಿ, ಪ್ರೊ. ವಿನಯ್ ಗಡೆದ, ಪ್ರೊ. ಚೆನ್ನಮ್ಮ ಚೆಲುಮೂರ ಹಾಗೂ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ರವಿ ಕಟ್ಟಿಮನಿ ಉಪಸ್ಥಿತರಿದ್ದರು.

# ವಿಶ್ವ ಆರೋಗ್ಯ ದಿನ ಆರಚರಣೆ ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು: ಡಾ.ಸುರೇಂದ್ರ ಬಾಬು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನರಿಗೆ ಕಾಲಕ್ಕೆ ಅನುಗುಣವಾಗಿ ಆರೋಗ್ಯ ಮಾಹಿತಿ ನೀಡುವ ಉದ್ದೇಶದಿಂದ ಮತ್ತು ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕೆಂಬ ಸದುದ್ದೇಶದಿಂದ ಈ ದಿನವನ್ನು ವಿಶ್ವ ಆರೋಗ್ಯ ದಿನವನ್ನಾಗಿ 1948ರಿಂದ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.**



ಏಪ್ರಿಲ್ 07ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯಾಲಯದ ಕೃಷ್ಣ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಮನುಷ್ಯನ ಜೀವನ ಶೈಲಿಯಲ್ಲಿ ಬದಲಾವಣೆ ಕಂಡುಬಂದಿದ್ದು, ತಿನ್ನುವ ಆಹಾರ, ತೊಡುವ ಬಟ್ಟೆ ಎಲ್ಲವು ಬದಲಾವಣೆಯಾಗಿದೆ. ಈ ವರ್ಷದ ಘೋಷವಾಕ್ಯ ಆರೋಗ್ಯಕ್ಕಾಗಿ ಒಟ್ಟಾಗಿ ವಿಜ್ಞಾನದೊಂದಿಗೆ ನಿಲ್ಲು ಎಂಬ ಸಂದೇಶದೊಂದಿಗೆ ಗ್ರಾಮೀಣ ಭಾಗದಲ್ಲಿ ಜೀವನ ಶೈಲಿಯಲ್ಲಿ ಬದಲಾವಣೆ ತರಲು, ಸಮುದಾಯದಲ್ಲಿ ಜಾಗೃತಿಗೊಳಿಸಲು ಆರೋಗ್ಯ ಇಲಾಖೆ ಸದಾ ಕಾರ್ಯಾನ್ಮುಖವಾಗಬೇಕು ಎಂದರು.

ವೈಜ್ಞಾನಿಕ ತಳಹದಿಯ ಮೇಲೆ ಇಂದಿನ ದಿನಮಾನಗಳಲ್ಲಿ ಕಂಡು ಬರುತ್ತಿರುವ ರೋಗರುಜಿನಗಳ ಕುರಿತು ನಿಖರವಾದ ಮಾಹಿತಿಯನ್ನು ಜನತೆಗೆ ತಲುಪಿಸುವ ಮೂಲಕ ರೋಗ ಹರಡುವಿಕೆಯ ಮಾರ್ಗಗಳನ್ನು ತಡೆಗಟ್ಟಲು ಎಲ್ಲರೂ ಶ್ರಮಿಸೋಣವೆಂದರು. ಸಂಶೋಧನೆ-ಚಾಲಿತ ನೀತಿಗಳು ಮತ್ತು ಅಂತರಾಷ್ಟ್ರೀಯ ತಂಡದ ಕೆಲಸದ ಮೇಲೆ ಕೇಂದ್ರೀಕರಿಸುವ ಮೂಲಕ, ಗುಣಮಟ್ಟದ ಆರೋಗ್ಯ ರಕ್ಷಣೆಯನ್ನು ಎಲ್ಲೆಡೆ ಎಲ್ಲರಿಗೂ ಪ್ರವೇಶಿಸುವಂತೆ ಮಾಡುವ ಗುರಿಯನ್ನು ಹೊಂದಿದೆ. ಈ ಅಭಿಯಾನವು ವಿಜ್ಞಾನ ಮತ್ತು ಸಾರ್ವಜನಿಕ ಆರೋಗ್ಯದಲ್ಲಿ ವಿಶ್ವಾಸವನ್ನು ಪುನರ್‌ನಿರ್ಮಿಸಲು ಒಗ್ಗಟ್ಟನ್ನು ಒತ್ತಾಯಿಸುತ್ತದೆ ಎಂದರು.

ಪ್ರತಿಯೊಬ್ಬರೂ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ, ಜಾಗೃತಿ ಮೂಡಿಸುವ ಮೂಲಕ, ತಮ್ಮ ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ಮತ್ತು ನ್ಯಾಯಯುತ, ಆದ-ಾರಿತ ನೀತಿಗಳನ್ನು ರಚಿಸಲು ಸಹಾಯ ಮಾಡುವ ಮೂಲಕ ಭಾಗವಹಿಸಲು ಪ್ರೋತ್ಸಾಹಿಸಲಾಗುತ್ತದೆ. ಹವಮಾನಕ್ಕನುಗುಣವಾಗಿ ಬೇಸಿಗೆಯ ಪ್ರಕರತೆ ನವಜಾತ ಶಿಶು, ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ಧರ ಸುರಕ್ಷತೆ ಕಾಳಜಿ ಆದ್ಯತೆ ನೀಡಬೇಕೆಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾದಿಕಾರಿ ಡಾ.ಗಣೇಶ ಕೆ., ಜಿಲ್ಲಾ ಎನ್ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ್ ನಾರಾ, ತಾಲೂಕು ಆರೋಗ್ಯ ಅಧಿಕಾರಿ ಡಾ.ಅಮೃತ್ ಹುಕ್ಕೇರಿ, ಸಹಾಯಕ ಆಡಳಿತ ಅಧಿಕಾರಿ ಶಹಜಾನ್, ಕಚೇರಿ ಅಧಿಕ್ಷಕ ಶ್ರೀಧರ್ ಕುಲಕರ್ಣಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಪ್ತ ಸಹಾಯಕ ಲೇಪಾಕ್ಷಯ್ಯ, ಬಿಹೆಚ್‌ಇಓ ನಾಗರಾಜ್ ಸರೋಜಾ ಕೆ., ಹಿರಿಯ ಹೆಚ್‌ಐಓ ಸುರೇಶ, ತಾಯಪ್ಪ, ಅಡಿವೆಪ್ಪ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಕಚೇರಿ ಅಧಿಕಾರಿ ಸಿಬ್ಬಂದಿಯವರು ಕಾರ್ಯಕ್ರಮದಲ್ಲಿ ಉಪಸ್ಥಿತಿರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಸಿಲ್ಕ್ ಟೆಕ್ನಾಲಜಿ ಎಂಜಿನಿಯರಿಂಗ್

ಸಿಲ್ಕ್ ಟೆಕ್ನಾಲಜಿ ಎಂಜಿನಿಯರಿಂಗ್ (Silk Technology Engineering) ಎಂಬುದು ರೇಷ್ಮೆ ಉತ್ಪಾದನೆ, ಸಂಸ್ಕರಣೆ, ನೂಲು ತೆಗೆಯುವುದು ಮತ್ತು ಬಟ್ಟೆ ತಯಾರಿಕೆಯ ತಂತ್ರಜ್ಞಾನದ ಮೇಲಿನ 4 ವರ್ಷಗಳ (8 ಸೆಮಿಸ್ಟರ್‌ಗಳು) ಪದವಿ ಕೋರ್ಸ್ ಆಗಿದೆ. ಈ ಕೋರ್ಸ್ ರೇಷ್ಮೆ ಕೃಷಿ, ಜವಳಿ ವಿಜ್ಞಾನ ಮತ್ತು ಮಾರುಕಟ್ಟೆ ಕೌಶಲ್ಯಗಳನ್ನು ಒಳಗೊಂಡಿದ್ದು, ಜವಳಿ ಉದ್ಯಮದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ. ಸಿಲ್ಕ್ ಟೆಕ್ನಾಲಜಿ ಎಂಜಿನಿಯರಿಂಗ್ ಕೋರ್ಸ್ ವಿವರಗಳು: ಕೋರ್ಸ್ ಹೆಸರು: ಬಿ.ಟೆಕ್ / ಬಿ.ಇ (ಸಿಲ್ಕ್ ಟೆಕ್ನಾಲಜಿ) ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು) ಅರ್ಹತೆ: 12ನೇ ತರಗತಿಯಲ್ಲಿ ವಿಜ್ಞಾನ ವಿಭಾಗ (ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ – PCM) ಪ್ರವೇಶ ಪರೀಕ್ಷೆ: ಕರ್ನಾಟಕದಲ್ಲಿ ಏಅಇಖ ಅಥವಾ COMEDK ಮುಖ್ಯ ವಿಷಯಗಳು: ರೇಷ್ಮೆ ಕೃಷಿ (Sericulture), ಫೈಬರ್ ವಿಜ್ಞಾನ (Fiber Science), ನೂಲುವುದು ಮತ್ತು ನೇಯ್ಗೆ (Spinning & Weaving), ಬಣ್ಣಹಾಕುವುದು (Dyeing), ಮತ್ತು ಜವಳಿ ನಿರ್ವಹಣೆ. ಪ್ರಮುಖ ಸಂಸ್ಥೆಗಳು: SKSJTI, ಬೆಂಗಳೂರು (ಸರ್ಕಾರಿ ಶ್ರೀ ಕೃಷ್ಣರಾಜೇಂದ್ರ ಸಿಲ್ವರ್ ಜುಬಿಲಿ ತಾಂತ್ರಿಕ ಸಂಸ್ಥೆ) ವಿಟಿಯು (VTU) ಸಂಯೋಜಿತ ಕಾಲೇಜುಗಳು ಕರ್ನಾಟಕ ಸರ್ಕಾರ ಉದ್ಯೋಗಾವಕಾಶಗಳು: ರೇಷ್ಮೆ ಉತ್ಪಾದನಾ ಘಟಕಗಳು ಜವಳಿ ಗಾರ್ಮೆಂಟ್ಸ್ (Garment Industries) ಉತ್ಪಾದನಾ ಗುಣಮಟ್ಟ ನಿಯಂತ್ರಕರು (Quality Control) ಸಂಶೋಧನೆ ಮತ್ತು ಅಭಿವೃದ್ಧಿ ಪ್ರಮುಖ ಅಂಶಗಳು: ರೇಷ್ಮೆ ತಂತ್ರಜ್ಞಾನವು ಪೋಸ್ಟ್–ಕೊಕೂನ್ ತಂತ್ರಜ್ಞಾನ (Post Cocoon Technology) ಮತ್ತು ನೇಯ್ಗೆಯ ಮೇಲೆ ಕೇಂದ್ರೀಕರಿಸುತ್ತದೆ. ಕೋರ್ಸ್ ಮುಗಿದ ನಂತರ, ವಿದ್ಯಾರ್ಥಿಗಳು ಜವಳಿ ಮಾರುಕಟ್ಟೆ, ವಿನ್ಯಾಸ ಮತ್ತು ಉತ್ಪಾದನಾ ಕ್ಷೇತ್ರಗಳಲ್ಲಿ ವೃತ್ತಿಜೀವನವನ್ನು ರೂಪಿಸಿಕೊಳ್ಳಬಹುದು.

## ಲೆಬನಾನ್ ಮೇಲಿನ ದಾಳಿ ನಿಲ್ಲುವುದಿಲ್ಲ: ಪಾಕಿಸ್ತಾನಕ್ಕೆ ಇಸ್ರೇಲ್ ತಿರುಗೇಟು

ನೈಜ್ಯ ದೆಸೆ ನ್ಯೂಸ್

**ಟೆಲ್ ಅವಿವ್: ಇರಾನ್ ಜೊತೆ ಮಾತ್ರ ಕದನ ವಿರಾಮ. ಲೆಬನಾನ್ ಮೇಲಿನ ದಾಳಿ ಮುಂದುವರಿಯುತ್ತದೆ ಎಂಬ ಹೇಳಿಕೆ ನೀಡುವ ಮೂಲಕ ಇಸ್ರೇಲ್ ಪಾಕಿಸ್ತಾನದ ಗೌರವವನ್ನು ಹರಾಜಿಗಿಟ್ಟಿದೆ. ಪಾಕಿಸ್ತಾನದ ಪ್ರಧಾನಿ ಷರೀಫ್ ಅವರು ಈ ಕದನ ವಿರಾಮ ಅಮೆರಿಕ ಮತ್ತು ಇರಾನ್ ನಡುವೆ ಮಾತ್ರವಲ್ಲದೆ ಲೆಬನಾನ್ ಮತ್ತು ಇತರ ಸಂಘರ್ಷ ಪೀಡಿತ ಪ್ರದೇಶಗಳಿಗೂ ಅನ್ವಯಿಸುತ್ತದೆ ಎಂದು ಫೀ ನಲ್ಲಿ ಪೋಸ್ಟ್ ಮಾಡಿದ್ದರು.**



ಪಾಕಿಸ್ತಾನದ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಹೇಳಿಕೆಯನ್ನು ತಿರಸ್ಕರಿಸಿದರು ಮತ್ತು ಈ ಕದನ ವಿರಾಮ ಇರಾನ್ ಮತ್ತು ಯುಎಸ್ ನಡುವಿನ ಸಂಘರ್ಷಕ್ಕೆ ಮಾತ್ರ ಸೀಮಿತವಾಗಿದೆ ಮತ್ತು ಲೆಬನಾನ್‌ನಲ್ಲಿ ಹೆಜ್ಬೊಲ್ಲಾ ವಿರುದ್ಧ ಇಸ್ರೇಲ್‌ನ ಕಾರ್ಯಾಚರಣೆಗಳಿಗೆ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಇರಾನ್ ಮೇಲಿನ ದಾಳಿಯನ್ನು ಎರಡು ವಾರಗಳ ಕಾಲ ಸ್ಥಗಿತಗೊಳಿಸುವ ಅಧ್ಯಕ್ಷ ಟ್ರಂಪ್ ಅವರ ನಿರ್ಧಾರವನ್ನು ಇಸ್ರೇಲ್ ಬೆಂಬಲಿಸುತ್ತದೆ. ಇರಾನ್ ಇನ್ನು ಮುಂದೆ ಅಮೆ–ರಿಕ, ಇಸ್ರೇಲ್, ಇರಾನ್‌ನ ಅರಬ್ ನೆರೆಹೊರೆಯವರು ಮತ್ತು ಜಗತ್ತಿಗೆ ಪರಮಾಣು, ಕ್ಷಿಪಣಿ ಅಥವಾ ಭಯೋತ್ಪಾದಕ ಬೆದ–ರಿಕೆಯನ್ನು ಒಡ್ಡುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ಅಮೆ–ರಿಕದ ಪ್ರಯತ್ನಗಳನ್ನು ಬೆಂಬಲಿಸುವುದಾಗಿ ಇಸ್ರೇಲ್ ಹೇಳಿದೆ. ಮುಂಬರುವ ಮಾತುಕತೆಗಳಲ್ಲಿ ಅಮೆರಿಕ, ಇಸ್ರೇಲ್ ಮತ್ತು ಇಸ್ರೇಲ್‌ನ ಪ್ರಾದೇಶಿಕ ಮಿತ್ರರಾಷ್ಟ್ರಗಳ ಈ ಗುರಿಗಳು ಮತ್ತು ಬದ್ಧತೆಗಳನ್ನು ಸಾಧಿಸಲು ತಾನು ಬದ್ಧನಾಗಿದ್ದೇನೆ ಎಂದು ಅಮೆರಿಕ ಇಸ್ರೇಲ್‌ಗೆ ತಿಳಿಸಿದೆ. ಎರಡು ವಾರಗಳ ಕದನ ವಿರಾಮವು ಲೆಬನಾನ್ ಅನ್ನು ಒಳಗೊಂಡಿಲ್ಲ.

# ಭೂಮಿ ಪೂಜೆ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: 2025–26ನೇ ಸಾಲಿನ ರಾಜ್ಯ ಹಣಕಾಸು ಆಯೋಗ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಅನಿರ್ಬಂಧಿತ ಯೋಜನೆಯಡಿ ವಿಕಲಚೇತನರಿಗೆ ಮೀಸಲಿಟ್ಟ ಅನುದಾನದಡಿ ವಿಕಲಚೇತನರ ಪುನರ್ವಸತಿ ಕೇಂದ್ರ ಕಟ್ಟಡ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಬುಧವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದಲ್ಲಿ ಚಾಲನೆ ನೀಡಿದರು.**



ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಮನ್ಸೂರ್ ಅಹಮದ್, ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾ–ರಿಗಳು ಉಪಸ್ಥಿತರಿದ್ದರು.




# ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಿ: ಸಚಿವ ಡಾ.ಶರಣಪ್ರಕಾಶ್ ಆರ್.ಪಾಟೀಲ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಸಾರ್ವಜನಿಕ–ರಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚ–ರಿಕೆ ವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಸೂಚಿಸಿದರು.**

ಏಪ್ರಿಲ್ 08ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕು–ರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಗ್ರಾಮ ಪಂಚಾಯತಿಗಳು, ನಗರ ಸ್ಥಳೀಯ ಸಂಸ್ಥೆಗಳು, ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಒತ್ತು ನೀಡಬೇಕು. ಯಾವುದೇ ಅಡೆತಡೆ ಇಲ್ಲದೆ ನೀರು ಪೂರೈಸಲು ಗಮನ ಹ–ರಿಸಬೇಕು. ಸ್ಥಳೀಯವಾದ ಸಮಸ್ಯೆಗಳನ್ನು ತಮ್ಮ ಹಂತದಲ್ಲಿ ಪರಿಹರಿಸಿ ಗ್ರಾಮ ಪಂಚಾಯತ್ಗಳು ಮತ್ತು ಸ್ಥಳೀಯ ಸಂಸ್ಥೆಗಳ ಅನುದಾನ ಬಳಸಿಕೊಂಡು ಕಾಮಗಾರಿ ನಡೆಸಬೇಕು. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅವರು ತಿಳಿಸಿದರು.

ನೀರಿನ ಸಮಸ್ಯೆಗಳಿರುವ ಗ್ರಾಮಗಳ ಪಟ್ಟಿ ಮಾಡಿ, ಕೂಡಲೇ ಆಯಾ ಗ್ರಾಮಗಳಲ್ಲಿರುವ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿ



ಕೊಳ್ಳುವುದು ಆಯಾ ತಾಲೂಕಿನ ತಹಶೀಲ್ದಾರ್, ತಾಲೂಕು ಪಂಚಾಯತ್ ಇಓ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಗಳದ್ದಾಗಿರುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಪ್ರತಿಯೊಂದು ತಾಲೂಕು ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿದ್ದರೆ, ಮತ್ತು ಸಮಸ್ಯೆಗಳನ್ನು ಬಗೆಹರಿಸಿರುವ ಬಗ್ಗೆ ಆಯಾ ಕ್ಷೇತ್ರದ ಶಾಸಕರ ಗಮನಕ್ಕೆ ತರಬೇಕು. ಮತ್ತು ಪ್ರತಿಯೊಂದು ಮಾಹಿತಿಯನ್ನು ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ನೀಡಬೇಕು.

ಪ್ರಸ್ತುತ ತುಂಗಭದ್ರಾ ಜಲಾಶಯದಲ್ಲಿ 17.26 ಟಿಎಂಸಿ ನೀರು ಸಂಗ್ರಹವಿದ್ದು, ಜೊತೆಗೆ 200 ಕ್ಯೂಸೆಕ್ ನೀರು ಒಳಹರಿವು ಇದ್ದು, ಸಿಂಧನೂರು ಮಾನ್ವಿ ಹಾಗೂ ರಾಯಚೂರು ತಾಲೂಕಿನ ಗ್ರಾಮಗಳಿಗೆ ಸಮರ್ಪಕ ನೀರು ಒದಗಿಸಬಹುದಾಗಿದೆ. ಜಲಾಶಯ ದಲ್ಲಿ ನೀರಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು ಎಂದರು. ಜಿಲ್ಲೆಯ ಸಿಂಧನೂರು ತಾಲೂಕಿನಲ್ಲಿ 153 ಕೆರೆಗಳಿದ್ದು, ಅದರಲ್ಲಿ 28 ಕೆರೆಗಳು ಶೇ.51ರಿಂದ 75 ರಷ್ಟು ತುಂಬಿವೆ. 42 ಕೆರೆಗಳು ಶೇ.50 ರಷ್ಟು ತುಂಬಿದ್ದು, 84 ಕೆರಗೆಲೂ ಇನ್ನೂ ಶೇ.25ರಷ್ಟು ಸಹ ತುಂಬಿಲ್ಲ. ಕೂಡಲೇ ಎಲ್ಲಾ ಕೆರೆಗಳನ್ನು ಶೇ.100ರಷ್ಟು ಭರ್ತಿ ಮಾಡಬೇಕು. ಕಳೆದ ಬಾರಿ ನೀರಿನ ಸಮಸ್ಯೆಯನ್ನು ನೀಗಿಸಲು ಬಾಡಿಗೆಗೆ ಪಡೆದಿದ್ದ ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳ ಬಾಡಿಗೆ ಪಾವತಿಸದಿರುವುದು ಗಮನಕ್ಕೆ ಬಂದಿದ್ದು, ಕೂಡಲೇ ಬಾಕಿ ಉಳಿದಿರುವ ಬಾಡಿಗೆ ಮೊತ್ತವನ್ನು ಆಯಾ ಬೋರ್‌ವೆಲ್ ಮತ್ತು ಟ್ಯಾಂಕರ್ ನೀಡಿದವರಿಗೆ ಪಾವತಿ ಮಾಡಬೇಕು.

ಮತ್ತು ಈ ಬಾರಿ ಜಿಲ್ಲೆಯಲ್ಲಿ 35 ಗ್ರಾಮ ಪಂಚಾಯತ್‌ಗಳ 53 ಗ್ರಾಮಗಳಲ್ಲಿ 62 ಬೋವೆಲ್ ಗಳನ್ನು ಬಾಡಿಗೆ ಪಡೆಯಲಾಗಿದ್ದು, ಅಗತ್ಯವಿದ್ದರೆ, ಟ್ಯಾಂಕರ್‌ಗಳನ್ನು ಬಾಡಿಗೆ ಪಡೆದು ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು. ಜಿಲ್ಲೆಯಲ್ಲಿರುವ 782 ಆರ್ ಒ ಪ್ಲಾಂಟ್‌ಗಳಲ್ಲಿ 589 ಘಟಕಗಳು ಚಾಲ್ತಿಯಲ್ಲಿವೆ ಉಳಿದ ಪ್ಲಾಂಟ್‌ಗಳನ್ನು ಶೀಘ್ರವೇ ಆರಂಭಿಸಬೇಕು. ಪ್ರತಿಯೊಂದು ಪ್ಲಾಂಟ್ಗಳ ರಿಪೇರಿಗಾಗಿ 50 ಸಾವಿರದಂತೆ ವೆಚ್ಚ ಮಾಡಲು ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ಅಗತ್ಯವಿದ್ದರೆ ಆಯಾ ಗ್ರಾಮ ಪಂಚಾಯಿತಿಯಿಂದ ವೆಚ್ಚ ಮಾಡಿ ಗ್ರಾಮಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಆರಂಭಿಸಬೇಕು ಎಂದರು.

ಸಿಂಧನೂರು ನಗರಸಭೆ ವ್ಯಾಪ್ತಿಯಲ್ಲಿನ 31 ವಾರ್ಡ್ಗಳಲ್ಲಿ 8 ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದ್ದು, ಮುದಗಲ್ ನಲ್ಲಿ 10 ದಿನಕ್ಕೊಮ್ಮೆ, ಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 8 ದಿನಕ್ಕೊಮ್ಮೆ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಕೂಡಲೇ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಜನರಿಗೆ ಸಮರ್ಪಕವಾಗಿ ನೀರನ್ನು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕಯಗೊಳ್ಳಬೇಕು ಎಂದರು. ಇದೇ ವೇಳೆ ನಗರ ಶಾಸಕ ಡಾ.ಶಿವರಾಜ ಪಾಟೀಲ್ ಮಾತನಾಡಿ, ರಾಯಚೂರು ನಗರ ವ್ಯಾಪ್ತಿಯಲ್ಲಿ ಅಂತರ್ಜಲ ಮೂಲದಿಂದ ಮಾತ್ರ ಕುಡಿಯುವ ನೀರನ್ನು ಪಡೆಯಬಹುದಾಗಿದ್ದು, ಕಳೆದ ಬಾರಿ ನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ 14 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳನ್ನು ಬಾಡಿಗೆ ಪಡೆಯಲಾಗಿತ್ತು. ಅದಕ್ಕಾಗಿ 50 ಲಕ್ಷ ನೀಡಲಾಗುವುದು ಎಂದು ಹೇಳಲಾಗಿತ್ತು. ಆದ–'ರೆ ಈವರೆಗೆ ಕೇವಲ 6–7 ಲಕ್ಷ ಮಾತ್ರ ಬಿಡುಗಡೆ ಮಾಡಲಾಗಿದೆ. ಉಳಿದ ಬಾಡಿಗೆ ಮೊತ್ತವನ್ನು ನೀಡಿಲ್ಲ. ಹಳ್ಳಿಗಳಿಗೆ ಹೇಗೆ ಮುಖ ಹೊತ್ತು ಹೋಗಬೇಕು.

ಮೊದಲ ಆಧ್ಯತೆಯಾಗಿ ಟ್ಯಾಂಕರ್ ಮತ್ತು ಬೋರ್‌ವೆಲ್ ಬಾಡಿಗೆ ಪಡೆದವರಿಗೆ ಬಾಡಿಗೆ ಹಣವನ್ನು ಪಾವತಿ ಮಾಡಬೇಕು ಎಂದು ತಿಳಿಸಿದರು. ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಕುಡಿಯುವ ನೀರಿನ ಸಮಸ್ಯೆಯ ಕುರಿತು ಮಾಹಿತಿ ನೀಡಲು ಸಾರ್ವಜನಿಕ–ರಿಗಾಗಿ ಸಹಾಯವಾಣಿ ಆರಂಭಿಸಲಾಗಿದೆ. ಆದರೆ ಸರಿಯಾಗಿ ಸ್ಪಂದನೆ ಸಿಗುತ್ತಿಲ್ಲ ಎಂಬ ದೂರುಗಳಿವೆ. ಸಾರ್ವಜನಿಕರು ಕುಡಿಯುವ ನೀರಿನ ಕುರಿತು ಮಾಹಿತಿ ನಿಡಿದಾಗ ಅದಕ್ಕೆ ಸಂಬಂಧಪಟ್ಟ ನೋಡೆಲ್ ಅಧಿಕಾರಿಗಳು ಮತ್ತು ಸಹಾಯವಾಣಿ ಸಿಬ್ಬಂದಿ ಸ್ಪಂಧಿಸಬೇಕು ಎಂದರು.

ಮಾನ್ವಿಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ಮಾನ್ವಿ ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಗೇಜ್ ಕಡಿಮೆಯಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದು, ಇದರಿಂದ ಕೆರೆ ತುಂಬಿಸಲು ಆಗುತ್ತಿಲ್ಲ ಎಂದರು. ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿಯಲ್ಲಿ ಒಟ್ಟು 1210 ಕಾಮಗಾರಿಗಳ ಗುರಿಯಿದ್ದು, ಅದರಲ್ಲಿ 1129 ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದಂತೆ 81 ಕಾಮಗಾರಿಗಳು ಪ್ರಗತಿಯಲ್ಲಿವೆ. ಈವರೆಗೆ ಶೇ.51 ರಷ್ಟು ಆರ್ಥಿಕ ಪ್ರಗತಿ ಸಾಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಪ್ರಕಾಶ್, ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕು ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಸಭೆಯಲ್ಲಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.